# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 289 ₹4, THURSDAY, 11 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26



## ನನ್ನ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸ್ಪಷ್ಟನೆ

ಬೆಂಗಳೂರು : ಬೆಳಗಾವಿ ಎಂದೆಂದಿಗೂ ಕರ್ನಾಟಕದ ಅವಿಭಾಜ್ಯ ಅಂಗ. ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಿತ್ತು ಎಂಬ ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಬೇಡಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಮನವಿ ಮಾಡಿದ್ದಾರೆ.

ಕ್ವೀನ್ಸ್ ರಸ್ತೆಯಲ್ಲಿರುವ ಇಂದಿರಾಗಾಂಧಿ ಭವನದಲ್ಲಿ ನಡೆದ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರುಗಳ ಸಭೆ ಬಳಿಕ ಮಾತನಾಡಿದ ಸಚಿವರು, ತಮ್ಮ ಹೇಳಿಕೆ ಬಗ್ಗೆ ಸ್ಪಷ್ಟಿಕರಣ ನೀಡಿದರು.

ನಾನು ಮುಂಬೈ ಪ್ರಾಂತ್ಯ ಅನ್ನೋ ಬದಲು ಬಾಯಿ ತಪ್ಪಿ ಮಹಾರಾಷ್ಟ್ರ ಎಂದೇ. ಅದನ್ನು ತಪ್ಪಾಗಿ ಯಾರು ಅರ್ಥೈಸಬೇಡಿ. ಸ್ವಾತಂತ್ರ್ಯ ಪೂರ್ವ ಮಹಾರಾಷ್ಟ್ರ ರಾಜ್ಯವೇ ಇರಲಿಲ್ಲ ಎಂದು ಸಚಿವರು ಹೇಳಿದರು.

ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಕಾರದಗಾ ಗ್ರಾಮದಲ್ಲಿ ಕಳೆದ ಭಾನುವಾರ ನಡೆದ ಕನ್ನಡ ಸಮಾವೇಶದ ಉದ್ಘಾಟನಾ ಸಮಾರಂಭದ ವೇಳೆ ಸಚಿವರು, ಬಾಯ್ತಪ್ಪಿ ಮುಂಬೈ ಪ್ರಾಂತ್ಯ ಎನ್ನುವ ಬದಲಿಗೆ ಮಹಾರಾಷ್ಟ್ರ ಎಂದು ಉಲ್ಲೇಖಿಸಿದ್ದರು. ನಂತರ ಅದೇ ದಿನ ಸ್ಪಷ್ಟನೆಯನ್ನೂ ನೀಡಿದ್ದರು.

# ಅಪಪ್ರಚಾರ ನಿಲ್ಲಿಸಿ; ಬಿಜೆಪಿಯರಿಗೆ ಚಾಟಿ ಬೀಸಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು: ಅಪಪ್ರಚಾರ ಮಾಡುವುದನ್ನು ಬಿಡಬೇಕು. ಸರ್ಕಾರದಲ್ಲಿ ಹಣವಿಲ್ಲ ಎನ್ನುವ ಅಪಪ್ರಚಾರವನ್ನು ಕೂಡಲೇ ನಿಲ್ಲಿಸಿ. ಇಷ್ಟು ದೊಡ್ಡ ದೊಡ್ಡ ಕಾರ್ಯಕ್ರಮಗಳು ಹಣವಿಲ್ಲದೆ ನಡೆಯುತ್ತಿದೆಯೇ ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನೆ ಮಾಡಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಬುಧವಾರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸಭೆಯನ್ನು ನಡೆಸಲಾಗಿದೆ. ಇಲ್ಲಿ ಪಕ್ಷದ ಅತೃಪ್ತ ನಾಯಕರಿಗೆ ಸಿಎಂ ಸಿದ್ದರಾಮಯ್ಯ ಚಾಟಿ ಬೀಸಿದ್ದಾರೆ. ನಮ್ಮವರೇ ಅಪಪ್ರಚಾರ ಮಾಡುವುದನ್ನು ಬಿಡಬೇಕು. ಅದರ ಬದಲಿಗೆ ಬಿಜೆಪಿಯವರು ಮಾಡುವ ಅಪ ಪ್ರಚಾರವನ್ನು ಮೆಟ್ಟಿ ನಿಲ್ಲಿ ಎಂದು ಕರೆ ನೀಡಿದ್ದಾರೆ.

ಮಾರ್ಚ್ ಒಳಗೆ ಎಲ್ಲಾ ಶಾಸಕರಿಗೆ 25 ಕೋಟಿ ರೂ.ಗಳ ಕೆಲಸ: ಮಾರ್ಚ್ ಒಳಗೆ



ಎಲ್ಲ ಶಾಸಕರಿಗೆ 25 ಕೋಟಿ ರೂ.ಗಳ ಕೆಲಸ ನೀಡಲು ಸೂಚಿಸಿದ್ದೇನೆ. ನಾವು ಸತ್ಯ ಹೇಳಿ ರಾಜಕೀಯ ಲಾಭವನ್ನು ಪಡೆಯುವ ಪ್ರಯತ್ನ ಮಾಡಬೇಕು. ಗ್ಯಾರಂಟಿಗಳನ್ನು ಅಪಹಾಸ್ಯ, ಅವಹೇಳನ ಮಾಡಿದವರೇ ಈಗ ಪ್ರಧಾನಿ ನರೇಂದ್ರ ಮೋದಿ ಗ್ಯಾರಂಟಿ ಎಂದು ಶುರು ಮಾಡಿದ್ದಾರೆ. ನಾವು ಜನರಿಗೆ ಸತ್ಯವನ್ನು ಹೇಳಬೇಕು. ಭಾರತದ ಇತಿಹಾಸದಲ್ಲಿ ಯಾವ ಸರ್ಕಾರವೂ ಈ ರೀತಿಯ ಗ್ಯಾರಂಟಿಗಳನ್ನು, ಕಾರ್ಯಕ್ರಮಗಳನ್ನು ಜಾರಿ ಮಾಡಿಲ್ಲ. ಇದರಿಂದ ಬಡವರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ತುಂಬಲು ಸಾಧ್ಯವಾಗುತ್ತದೆ. ದಲಿತರು , ಹಿಂದುಳಿದವರು , ಮಹಿಳೆಯರಿಗೆ ಅನುಕೂಲವಾಗಲಿದೆ. ಶಕ್ತಿ, ಅನ್ನಭಾಗ್ಯ, ಗೃಹ ಜ್ಯೋತಿ, ಗೃಹಲಕ್ಷ್ಮಿ ಯೋಜನೆಗಳು ಮಹಿಳಾ ಸಬಲೀಕರಣಕ್ಕೆ ಪೂರಕವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ವಿವರಿಸಿದರು.

ಮೇವಿಗೆ, ಕುಡಿವ ನೀರಿಗೆ ತೊಂದರೆ ಆಗಿಲ್ಲ: ಬರಗಾಲ ಪೀಡಿತವಾಗಿದ್ದರೂ ಮೇವಿಗೆ, ಕುಡಿಯುವ ನೀರಿಗೆ ತೊಂದರೆಯಾಗಿಲ್ಲ. ಗ್ಯಾರಂಟಿ ಯೋಜನೆ ಜಾರಿಯಾಗಿರದಿದ್ದರೆ ಬರಗಾಲದ ಹಾಹಾಕಾರ ಎದ್ದಿರುತಿತ್ತು. ರಾಜ್ಯದ 223 ತಾಲೂಕುಗಳು ಬರಗಾಲ ಪೀಡಿತವಾಗಿದ್ದರೂ ಮೇವಿಗೆ, ಕುಡಿಯುವ ನೀರಿಗೆ ಹಾಗೂ ಉದ್ಯೋಗ ಖಾತ್ರಿ ಯೋಜನೆಗೆ ತೊಂದರೆಯಾಗಿಲ್ಲ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ರೈತರಿಗೆ ಇನ್ ಪುಟ್ ಸಬ್ಸಿಡಿ ಪರಿಹಾರ: ಕಳೆದ ವರ್ಷ ಸೆಪ್ಟೆಂಬರ್ ತಿಂಗಳಲ್ಲಿ ನಾವು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರೂ, ಈವರೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸಭೆ ಕರೆದಿಲ್ಲ.

ಪ್ರಧಾನಿ ನರೇಂದ್ರ ಮೋದಿಯವರನ್ನು ಹಾಗೂ ಅಮಿತ್ ಷಾ ಅವರನ್ನು ಭೇಟಿ ಮಾಡಿದಾಗ ಭರವಸೆ ನೀಡಿದ್ದರು. ಕೇಂದ್ರ ಸರ್ಕಾರ ಕೊಡುವವರೆಗೆ ಕಾಯಬಾರದು ಎಂದು 2000 ರೂ ವರೆಗೆ ರೈತರಿಗೆ ಇನ್ ಪುಟ್ ಸಬ್ಸಿಡಿ ಪರಿಹಾರ ಪ್ರಾರಂಭಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಮಾಹಿತಿ ನೀಡಿದರು.

## ಆರ್‌ಎಸ್‌ಎಸ್-ಬಿಜೆಪಿ ಕಾರ್ಯಕ್ರಮ ಅನ್ನೋದು ಸ್ಪಷ್ಟ; ರಾಮಮಂದಿರ ಪ್ರಾಣ ಪ್ರತಿಷ್ಠಾಪನೆಗೆ ಕಾಂಗ್ರೆಸ್ ಗೈರು



ನವದೆಹಲಿ: ರಾಮ ಮಂದಿರ ಪ್ರತಿಷ್ಠಾಪನಾ ಸಮಾರಂಭದಲ್ಲಿ ಕಾಂಗ್ರೆಸ್ ಭಾಗವಹಿಸುವುದಿಲ್ಲ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಈ ಆಹ್ವಾನವನ್ನು ತಿರಸ್ಕರಿಸಿದ್ದಾರೆ.

ಇನ್ನೀದು ಆರ್‌ಎಸ್‌ಎಸ್ ಮತ್ತು ಬಿಜೆಪಿಯ ಕಾರ್ಯಕ್ರಮ ಎಂದು ಕರೆದಿದ್ದಾರೆ. ಕಳೆದ ತಿಂಗಳು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಲೋಕಸಭೆಯಲ್ಲಿ ಕಾಂಗ್ರೆಸ್ ಸಂಸದೀಯ ಪಕ್ಷದ ನಾಯಕ ಅಧೀರ್ ರಂಜನ್ ಚೌಧರಿ ಅವರಿಗೆ ಅಯೋಧ್ಯೆಯಲ್ಲಿ ರಾಮ ಮಂದಿರವನ್ನ ಉದ್ಘಾಟಿಸಲು ಆಹ್ವಾನಗಳು ಬಂದಿದ್ದವು.

ಕೋಟ್ಯಂತರ ಭಾರತೀಯರು ಭಗವಾನ್ ರಾಮನನ್ನ ಪೂಜಿಸುತ್ತಾರೆ. ಧರ್ಮವು ಮಾನವನ ವೈಯಕ್ತಿಕ ವಿಷಯವಾಗಿದೆ, ಆದರೆ ಹಲವು ವರ್ಷಗಳಿಂದ ಬಿಜೆಪಿ ಮತ್ತು ಆರ್‌ಎಸ್‌ಎಸ್ ಅಯೋಧ್ಯೆಯಲ್ಲಿ ರಾಮ ಮಂದಿರವನ್ನು ರಾಜಕೀಯ ಯೋಜನೆಯನ್ನಾಗಿ ಮಾಡಿವೆ ಎಂದು ಕಾಂಗ್ರೆಸ್ ಜರಿದಿದೆ.

ಇದು ಬಿಜೆಪಿ ಮತ್ತು ಅದರ ಸೈದ್ಧಾಂತಿಕ ಮಾರ್ಗದರ್ಶಕ ರಾಷ್ಟ್ರೀಯ ಸ್ವಯಂಸೇವಕ ಸಂಘದ "ರಾಜಕೀಯ ಯೋಜನೆ" ಎಂದು ಹೇಳಿದೆ.

## ಅಯೋಧ್ಯೆಯಲ್ಲಿ ಕರ್ನಾಟಕ ಯಾತ್ರಿ ನಿವಾಸ ನಿರ್ಮಿಸಲು ರಾಜ್ಯ ಸರ್ಕಾರ ನಿರ್ಧಾರ

ಬೆಂಗಳೂರು: ಅಯೋಧ್ಯೆಯಲ್ಲಿ ಭವ್ಯ ಶ್ರೀ ರಾಮಮಂದಿರ ನಿರ್ಮಾಣವಾಗಿದ್ದು ಜನವರಿ 22 ರಂದು ರಾಮಮಂದಿರ ಉದ್ಘಾಟನೆಯಾಗಲಿದೆ. ಅಯೋಧ್ಯೆಗೆ ತೆರಳಬೇಕು ಮರ್ಯಾದಾ ಪುರುಷೋತ್ತಮ ಶ್ರೀ ರಾಮಚಂದ್ರನ ದರ್ಶನ ಪಡೆಯಬೇಕು ಎಂಬುದು ಅನೇಕ ಭಕ್ತರ ಆಸೆಯಾಗಿದೆ. ಹೀಗೆ ಕರ್ನಾಟಕದಿಂದ ಅಯೋಧ್ಯೆಗೆ ಹೋಗುವ ಭಕ್ತರಿಗೆ ರಾಜ್ಯ ಸರ್ಕಾರ ಗುಡ್ ನ್ಯೂಸ್ ನೀಡಿದೆ.

ರಾಮನೂರು ಅಯೋಧ್ಯೆಯಲ್ಲಿ ಕನ್ನಡಿಗರಿಗಾಗಿ ಕರ್ನಾಟಕ ಯಾತ್ರಿ ನಿವಾಸ ತಲೆ ಎತ್ತಲಿದೆ. ಕರ್ನಾಟಕದಿಂದ ಹೆಚ್ಚಿನ ಸಂಖ್ಯೆಯಲ್ಲಿ ಯಾತ್ರಿಗಳು ಅಯೋಧ್ಯೆಗೆ ಆಗಮಿಸಲಿದ್ದು, ಇವರಿಗಾಗಿ ವಸತಿ, ಊಟದ ವ್ಯವಸ್ಥೆಗಾಗಿ ಅತಿಥಿ ಗೃಹ



ನಿರ್ಮಾಣ ಮಾಡುವಂತೆ ಉತ್ತರ ಪ್ರದೇಶ ಸರ್ಕಾರಕ್ಕೆ ಕರ್ನಾಟಕ ಮುಜರಾಯಿ ಇಲಾಖೆ ಪತ್ರ ಬರೆದಿದೆ.

ಕರ್ನಾಟಕದಿಂದ ಬರುವ ಭಕ್ತರಿಗೆ ಸರಯೂ ನದಿ ಸಮೀಪದಲ್ಲಿ ಅತಿಥಿ ಗೃಹ ನಿರ್ಮಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2023ರ ಅಗಸ್ಟ್ ತಿಂಗಳಲ್ಲಿ ಉತ್ತರ ಪ್ರದೇಶ ಸರ್ಕಾರಕ್ಕೆ ಪತ್ರ ಬರೆದಿದ್ದರು. ಇದಕ್ಕೂ ಮುನ್ನ 2020ರಲ್ಲಿ ಬಿಎಸ್ ಯಡಿಯೂರಪ್ಪ ಅವರು ಉತ್ತರ ಪ್ರದೇಶ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಮನವಿ ಮಾಡಿದ್ದರು.

ರಾಜ್ಯದ ಮನವಿಗೆ ಉತ್ತರ ಪ್ರದೇಶ ಸರ್ಕಾರದ ಹೌಸಿಂಗ್ ಬೋರ್ಡ್ ಪ್ರತಿಕ್ರಿಯೆ ಪತ್ರ ಕಳುಹಿಸಿದೆ. ಅಯೋಧ್ಯೆಯಲ್ಲಿ ಕರ್ನಾಟಕ ಅತಿಥಿ ಗೃಹ ನಿರ್ಮಾಣಕ್ಕೆ ಬೇಕಾದ ಪೂರ್ವ ತಯಾರಿ ನಡೆಯುತ್ತಿದೆ. ಈ ಮೂಲಕ ರಾಜ್ಯದ ಪ್ರವಾಸಿಗರಿಗೆ ವಾಸ್ತವ ಹೂಡಲು ತೊಂದರೆ ಆಗದಂತೆ ಕ್ರಮ ವಹಿಸಲಾಗುವುದು. ಇನ್ನೊಂದು ವರ್ಷದಲ್ಲಿ ರಾಮಮಂದಿರದ ಬಳಿ ಅತಿಥಿ ಗೃಹ ತಲೆ ಎತ್ತಲಿದೆ. ರಾಜ್ಯದ ಭಕ್ತಾದಿಗಳ ಅನುಕೂಲಕ್ಕೆ ಸರಯೂ ನದಿ ಸಮೀಪದಲ್ಲಿ ಐದು ಎಕರೆ ಜಾಗದಲ್ಲಿ 10 ಕೋಟಿ ರೂ. ವೆಚ್ಚದಲ್ಲಿ ಮುಜರಾಯಿ ಇಲಾಖೆ ಅತಿಥಿ ಗೃಹ ನಿರ್ಮಿಸುತ್ತಿದೆ ಎಂದು ತಿಳಿಸಿದೆ.

ಒಟ್ಟಾರೆ ಅಯೋಧ್ಯೆಗೆ ರಾಮನ ದರ್ಶನಕ್ಕೆ ಹೋಗುವ ಕನ್ನಡಿಗರಿಗೆ ಅನುಕೂಲವಾಗುವಂತೆ ನಮ್ಮ ಸರ್ಕಾರ ಕಾರ್ಯಪ್ರವೃತ್ತವಾಗಿರೋದು ಖುಷಿ ವಿಚಾರ. ರಾಮಮಂದಿರದ ಬಳಿ ಸರಯೂ ನದಿಯ ಸಮೀಪದಲ್ಲೇ ನಮ್ಮ ಕರ್ನಾಟಕ ಅತಿಥಿ ಗೃಹ ನಿರ್ಮಾಣವಾಗಿ, ಆದಷ್ಟು ಬೇಗ ಕನ್ನಡಿಗರಿಗೆ ಸಿಗುವಂತಾಗಲಿ ಎಂಬುದೇ ಎಲ್ಲರ ಆಶಯವಾಗಿದೆ.

## ಲೋಕಸಭಾ ಚುನಾವಣೆ ಉಸ್ತುವಾರಿಗಳ ಪಟ್ಟಿ ಬಿಡುಗಡೆ

### ಬೆಳಗಾವಿಗೆ ಜಾರಕಿಹೊಳಿ–ಚಿಕ್ಕೋಡಿಗೆ ಹೆಬ್ಬಾಳಕರ್





ಬೆಂಗಳೂರು: ಮುಂಬರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕ್ಷೇತ್ರವಾರು ನೇಮಕ ಮಾಡಲಾಗಿದ್ದ ಉಸ್ತುವಾರಿಗಳಲ್ಲಿ ಕೆಲವು ಬದಲಾವಣೆ ಮಾಡಿ ಎಐಸಿಸಿ ಹೊಸ ಪಟ್ಟಿ ಬಿಡುಗಡೆ ಮಾಡಿದೆ.

ಹೊಸ ಪಟ್ಟಿಯ ಪ್ರಕಾರ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಬೆಳಗಾವಿ ಲೋಕಸಭಾ ಕ್ಷೇತ್ರದ ಉಸ್ತುವಾರಿಯನ್ನು ವಹಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಚಿಕ್ಕೋಡಿ ಉಸ್ತುವಾರಿ ನೀಡಲಾಗಿದೆ. ಚಿಕ್ಕೋಡಿ ಉಸ್ತುವಾರಿಯಾಗಿ ನೇಮಕಗೊಂಡಿದ್ದ ಎಚ್.ಕೆ.ಪಾಟೀಲ ಅವರಿಗೆ ಹಾವೇರಿ ಲೋಕಸಭಾ ಕ್ಷೇತ್ರದ ಉಸ್ತುವಾರಿ ನೀಡಲಾಗಿದೆ. ಹಾವೇರಿ ಉಸ್ತುವಾರಿಯಾಗಿ ನೇಮಕಗೊಂಡಿದ್ದ ಶಿವಾನಂದ ಪಾಟೀಲ ಅವರನ್ನು ಆ ಕ್ಷೇತ್ರದಿಂದ ತೆರವುಗೊಳಿಸಲಾಗಿದೆ. ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಈ ಹೊಸ ಬದಲಾವಣೆ ಮಾಡಲಾಗಿದೆ. ಅಖಿಲ ಭಾರತ ಕಾಂಗ್ರೆಸ್ ಸಮಿತಿ (ಎಐಸಿಸಿ) ಈ ಹೊಸ ಪಟ್ಟಿಗೆ ಒಪ್ಪಿಗೆ ನೀಡಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.



## ವಿಧಾನಸೌಧದ ಮುಂಭಾಗದಲ್ಲಿ ಆತ್ಮಹತ್ಯೆಗೆ ಯತ್ನಿಸಿದ ದಂಪತಿ

ಬೆಂಗಳೂರು: ವಿಧಾನಸೌಧದ ಮುಂಭಾಗದಲ್ಲಿ ದಂಪತಿಗಳು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ನಡೆದಿದೆ. ಜೆ.ಜೆ ನಗರದ ನಿವಾಸಿಗಳಾದ ಶಾಯಿಸ್ತಾ ದಂಪತಿಗಳು ವಿಧಾನಸೌಧದ ಮುಂಭಾಗಕ್ಕೆ ಬಂದಿದ್ದು, ಸೀಮೆಎಣ್ಣೆ ಸುರಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾರೆ. ತಕ್ಷಣ ಸ್ಥಳದಲ್ಲಿದ್ದ ಪೊಲೀಸರು ಇಬ್ಬರಿಂದ ಸೀಮೆಎಣ್ಣೆಯನ್ನು ಕಿತ್ತುಕೊಂಡು ಪರಿಸ್ಥಿತಿಯನ್ನು ಹತೋಟಿಗೆ ತಂದಿದ್ದಾರೆ. ಬ್ಯಾಂಕ್‌ನಿಂಧ ಸಾಲ ಪಡೆದುಕೊಂಡಿದ್ದ ದಂಪತಿಗಳು ಸಾಲವನ್ನು ತೀರಿಸಿದ ಹಿನ್ನಲೆಯಲ್ಲಿ, ಬ್ಯಾಂಕ್‌ನವರು ಜಮೀನನ್ನು ಹರಾಜು ಮಾಡಲು ಮುಂದಾಗಿದ್ದರು ಎನ್ನಲಾಗಿದೆ. ಇದರಿಂದ ಮನನೊಂದು ಈ ಕೃತ್ಯಕ್ಕೆ ಮುಂದಾಗಿದ್ದಾರೆ.

## 3064 ಕಾನ್ ಸ್ಟೆಬಲ್ ನೇಮಕಾತಿಗೆ ಜ. 28ರಂದು ಲಿಖಿತ ಪರೀಕ್ಷೆ

ಬೆಂಗಳೂರು: ಪೋಲಿಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಕಾನ್ ಸ್ಟೆಬಲ್ 3064 ಹುದ್ದೆಗಳ ನೇಮಕಾತಿಗೆ ಜನವರಿ 28ರಂದು ಲಿಖಿತ ಪರೀಕ್ಷೆ ನಡೆಸಲಾಗುವುದು.

ಸಿಎಆರ್, ಡಿಎಆರ್ ಸಶಸ್ತ್ರ ಪೋಲಿಸ್ ಕಾನ್ ಸ್ಟೆಬಲ್ ನೇಮಕಾತಿ ವಿಭಾಗ ಜನವರಿ 28ರಂದು ಬೆಳಗ್ಗೆ 11 ರಿಂದ 12:30 ವರೆಗೆ ರಾಜ್ಯವ್ಯಾಪಿ ಲಿಖಿತ ಪರೀಕ್ಷೆ ನಡೆಸಲು ದಿನಾಂಕ ನಿಗದಿ ಮಾಡಿದೆ.

ಅರ್ಹ ಅಭ್ಯರ್ಥಿಗಳಿಗೆ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಲಾಗುತ್ತಿದ್ದು, ಅಭ್ಯರ್ಥಿಗಳು ವೆಬ್ಸೈಟ್ ನಲ್ಲಿ ಪ್ರವೇಶ ಪತ್ರ ಡೌನ್ಲೋಡ್ ಮಾಡಿಕೊಳ್ಳಬಹುದಾಗಿದೆ

## ಲೋಕಸಭೆ ಚುನಾವಣೆಯಲ್ಲಿ ನಾನು ಸ್ಪರ್ಧಿಸಲ್ಲ



ಬೆಂಗಳೂರು: ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ಎಲ್ಲಾ ರಾಜಕೀಯ ಪಕ್ಷಗಳು ಭರ್ಜರಿ ತಯಾರಿ ನಡೆಸುತ್ತಿದ್ದು ಯಾವ ಅಭ್ಯರ್ಥಿಗೆ ಯಾವ ಕ್ಷೇತ್ರದಲ್ಲಿ ಟಿಕೆಟ್ ನೀಡಿದರೆ ಗೆಲ್ಲಬಹುದೆಂಬ ಲೆಕ್ಕಾಚಾರದಲ್ಲಿ ತೊಡಗಿವೆ ಇದರ ಮಧ್ಯ ಸಹಕಾರ ಸಚಿವ ಕೆ ಎನ್ ರಾಜಣ್ಣ ಅವರು ನಾನು ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಬಾರದೆಂಬ ಅಭಿಪ್ರಾಯಕ್ಕೆ ಬಂದಿದ್ದೇನೆ ಎಂದು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ತುಮಕೂರು ಕ್ಷೇತ್ರದಿಂದ ಸ್ಪರ್ಧೆ ಮಾಡಬೇಕೆಂದುಕೊಂಡಿದ್ದೆ, ಸದ್ಯ ನಾನು ಸ್ಪರ್ಧೆ ಮಾಡಬಾರದೆಂದು ಅಭಿಪ್ರಾಯಕ್ಕೆ ಬಂದಿದ್ದೇನೆ.

ಹಲವೆಡೆ ಸಚಿವರ ಸ್ಪರ್ಧೆ ಅನಿವಾರ್ಯತೆ ಇದೆ ಅಂತ ತಿಳಿಸುತ್ತಾರೆ. ನನ್ನ ಹೆಸರು ಬಂದರೆ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುತ್ತೇನೆ ಎಂದರು.

ಅಗತ್ಯವಿದ್ದರೆ ಸಚಿವರು ಎಂಪಿ ಚುನಾವಣೆಯಲ್ಲಿ ಸ್ಪರ್ಧಿಸಬೇಕಾಗುತ್ತದೆ. ಇನ್ನು ಯಾವ ಕ್ಷೇತ್ರಕ್ಕೂ ಅಭ್ಯರ್ಥಿ ಫೈನಲ್ ಆಗಿಲ್ಲ. ಶಿವಮೊಗ್ಗ ಕ್ಷೇತ್ರಕ್ಕೆ ಮಾತ್ರ ಕೆಪಿಸಿಸಿ ಅಧ್ಯಕ್ಷರು ಅಭ್ಯರ್ಥಿ ಹೇಳಿದ್ದಾರೆ.

ನಟ ಶಿವರಾಜ್ ಕುಮಾರ್ ಪತ್ನಿ ಗೀತಾ ಅವರನ್ನು ಕಣಕ್ಕೆ ಇಳಿಸುತ್ತೇವೆ ಎಂದು ಹೇಳಿದ್ದಾರೆ. ಅದು ಫೈನಲ್ ಆಗಿರಬಹುದೇನೋ ಗೊತ್ತಿಲ್ಲ ಎಂದು ಸಚಿವ ಕೆ.ಎನ್. ರಾಜಣ್ಣ ತಿಳಿಸಿದರು.

ಮಾಜಿ ಸಂಸದ ಮುದ್ದಹನುಮಗೌಡರು ಸಚಿವ ಕೆ.ಎನ್. ರಾಜಣ್ಣ ಭೇಟಿ ವಿಚಾರಕ್ಕೆ ಸಂಬಂಧಿಸಿದಂತೆ ಉತ್ತರಿಸಿದ ಅವರು ಮುಂದೆ ಹನುಮಗೌಡರ ಜೊತೆ ರಾಜಕೀಯ ಮಾತುಕತೆ ನಡೆದಿಲ್ಲ. ಅಷ್ಟೇ ಅಲ್ಲ ಯಾರು ಬೇಕಾದರೂ ಪಕ್ಷಕ್ಕೆ ಬರಲಿ ಸೋಮಣ್ಣ ಕಾಂಗ್ರೆಸ್ ಸೇರ್ತಾರೆ ಅನ್ನುವ ಊಹಾಪೋಹ ಇದೆ. ಸೋಮಣ್ಣಗೆ ಟಿಕೆಟ್ ಕೊಡುತ್ತಾರೆ ಎಂಬ ಚರ್ಚೆಯು ಆಗುತ್ತಿದೆ. ಶಾಸಕ ಟಿಬಿ ಜಯಚಂದ್ರ ತಮ್ಮ ಪುತ್ರನಿಗೆ ಟಿಕೆಟ್ ಕೇಳಿದ್ದಾರೆ ಶಾಸಕ ಟಿಬಿ ಜಯಚಂದ್ರ ಮಗನಿಗೆ ಅವಕಾಶ ಕೊಟ್ಟರೆ ಕೊಡಲಿ ಎಂದು ತಿಳಿಸಿದರು.



## ಬೆಳಗಾವಿ ಡಿಸಿ ಕಚೇರಿಯಲ್ಲಿ ವ್ಯಕ್ತಿ ಆತ್ಮಹತ್ಯೆಗೆ ಯತ್ನ

ಬೆಳಗಾವಿ: ವ್ಯಕ್ತಿಯೊರ್ವರು ಬೆಳಗಾವಿ ಡಿಸಿ ಕಚೇರಿಯಲ್ಲಿ ವಿಷ ಕುಡಿದು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಬುಧವಾರ ನಡೆದಿದೆ.

ಜಿಲ್ಲೆಯ ಗೋಕಾಕ ತಾಲೂಕಿನ ಲಗಮೇಶ್ವರ ಗ್ರಾಮದ ಕುಮಾರ್ ಕೊಪ್ಪದ (23) ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ. ಈತನು ಕುಡಿಯುವ ನೀರಿನ ಬಾಟಲಿಯೊಳಗೆ ವಿಷ ಹಾಕಿಕೊಂಡು ಬಂದು ಡಿಸಿ ಕಚೇರಿಯಲ್ಲಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾನೆ.

ಕೂಡಲೇ ಅಲ್ಲೇ ಇದ್ದ ಸಿಬ್ಬಂದಿಗಳು ವಿಷ ಕುಡಿದ ವ್ಯಕ್ತಿಯನ್ನು ಬಿಮ್ಸ್ ಗೆ ದಾಖಲಿಸಿದ್ದಾರೆ. ಆದರೆ ಯುವಕನ ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಸ್ಥಳಕ್ಕೆ ಮಾರ್ಕೇಟ್ ಪೊಲೀಸರು ಆಗಮಿಸಿ ಪರಿಶೀಲನೆ ನಡೆಸಿದ್ದಾರೆ.

## ಹಳಿ ತಪ್ಪಿದ ಚಾರ್ಮಿನಾರ್ ಎಕ್ಸ್‌ಪ್ರೆಸ್ ರೈಲಿನ 3 ಬೋಗಿಗಳು: 6 ಮಂದಿಗೆ ಗಾಯ

ಹೈದರಾಬಾದ್: ಹೈದರಾಬಾದ್‌ನ ನಾಂಪಲ್ಲಿಯಲ್ಲಿರುವ ಹೈದರಾಬಾದ್ ಡೆಕ್ಕನ್ ರೈಲ್ವೆ ನಿಲ್ದಾಣದಲ್ಲಿ ಬುಧವಾರ ಬೆಳಗ್ಗೆ ಚೆನ್ನೈ–ಹೈದರಾಬಾದ್ ಚಾರ್ಮಿನಾರ್ ಎಕ್ಸ್‌ಪ್ರೆಸ್ ರೈಲಿನ ಮೂರು ಬೋಗಿಗಳು ಹಳಿತಪ್ಪಿದ್ದು, ಘಟನೆಯಲ್ಲಿ ಆರು ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ರೈಲ್ವೆ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

ಹೈದರಾಬಾದ್ ಡೆಕ್ಕನ್ ರೈಲು ನಿಲ್ದಾಣವು ಈ ರೈಲಿನ ಅಂತಿಮ ತಾಣವಾಗಿದೆ.

ರೈಲು ನಿಲ್ದಾಣಕ್ಕೆ ಬಂದಾಗ, ಅದು ನಿಧಾನ ವೇಗದಲ್ಲಿ ಚಲಿಸುತ್ತಿತ್ತು ಮತ್ತು ಕೊನೆಯ ಪಾಯಿಂಟ್ ಅನ್ನು ದಾಟಿದೆ. ಹೀಗಾಗಿ ರೈಲಿನ ಮೂರು ಬೋಗಿಗಳು, ಎಸ್ 2, ಎಸ್ 3 ಮತ್ತು ಎಸ್ 6 ಹಳಿತಪ್ಪಲು ಕಾರಣವಾಯಿತು ಎಂದು ದಕ್ಷಿಣ ಮಧ್ಯ ರೈಲ್ವೆ(ಎಸ್‌ಸಿಆರ್)



ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯಲ್ಲಿ ಆರು ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಎಸ್‌ಸಿಆರ್ ಅಧಿಕಾರಿಯೊಬ್ಬರು ಹೇಳಿದ್ದಾರೆ. ಮಂಗಳವಾರ ಸಂಜೆ ಚೆನ್ನೈನಿಂದ ಹೊರಟ ರೈಲು ಬೆಳಗ್ಗೆ ಹೈದರಾಬಾದ್ ತಲುಪಿತ್ತು. ಘಟನೆ ಕುರಿತು ತನಿಖೆ ನಡೆಸಲಾಗುವುದು ಎಂದು ಅಧಿಕಾರಿ ತಿಳಿಸಿದ್ದಾರೆ.

## ರಾಜ್ಯದಲ್ಲಿ 252 ಮಂದಿಗೆ ಕೊರೋನಾ ಪಾಸಿಟಿವ್, ಇಬ್ಬರು ಸಾವು

ಬೆಂಗಳೂರು: ರಾಜ್ಯದಲ್ಲಿ ಕೋವಿಡ್–19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಮಂಗಳವಾರ 252 ಮಂದಿಗೆ ಕೊರೋನಾ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 1,131ಕ್ಕೆ ಏರಿಕೆಯಾಗಿದೆ.

ರಾಜ್ಯದಲ್ಲಿ ಕಳೆದ 24 ಗಂಟೆಗಳಲ್ಲಿ 252 ಮಂದಿಗೆ ಕೋವಿಡ್–19 ಪಾಸಿಟಿವ್ ದೃಢಪಟ್ಟಿದೆ. ಸೋಂಕಿನಿಂದ ರಾಜ್ಯದಲ್ಲಿ ಇಬ್ಬರು ಮೃತಪಟ್ಟಿದ್ದಾನೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಕೋವಿಡ್ ನಿಂದ 441 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಕಳೆದ 24 ಗಂಟೆಗಳಲ್ಲಿ 7,359 ಮಂದಿಗೆ ಕೊರೋನಾ ಟೆಸ್ಟ್ ಮಾಡಲಾಗಿದೆ. ಪಾಸಿಟಿವಿಟಿ ದರ ಶೇ. 3.42ರಷ್ಟಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.

## ರಾಜ್ಯದಾದ್ಯಂತ 2,000 ಕೋಟಿ ರೂ. ಮೌಲ್ಯದ 5,000 ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದೆ: ಸಚಿವ ಈಶ್ವರ್ ಖಂಡ್ರೆ

ಬೆಂಗಳೂರು: ರಾಜ್ಯದಾದ್ಯಂತ ಸುಮಾರು 2,000 ಕೋಟಿ ರೂಪಾಯಿ ಮೌಲ್ಯದ ಸುಮಾರು 5,000 ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದ್ದು, ಅದರಲ್ಲಿ ಹೆಚ್ಚಿನವು ಕೊಡಗಿನಲ್ಲಿದೆ ಎಂದು ಸಚಿವ ಈಶ್ವರ್ ಖಂಡ್ರೆ ಅವರು ಮಂಗಳವಾರ ಹೇಳಿದರು.


ವಿಕಾಸಸೌಧದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆ ಸಭೆ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ಕಾಫಿ, ಟೀ, ರಬ್ಬರ್ ಬೆಳೆಯಲು ಸಾವಿರಾರು ಎಕರೆ ಭೂಮಿಯನ್ನು ಲೀಸ್ಗೆ ನೀಡಲಾಗಿತ್ತು.

ಲೀಸ್ ಹಣ ಬರದೇ ಇದ್ದ ಕಂಪನಿಗಳಿಂದ ಭೂಮಿ ವಾಪಸ್ ಪಡೆಯಲು ನಿರ್ಧಾರ ಮಾಡಲಾಗಿದೆ. ಎಕರೆಗೆ ಕೇವಲ ಎರಡು ರೂ. ನಿಂದ ಏಳು ರೂ. ಅಂತ ನಿಗದಿ ಮಾಡಿಕೊಡಲಾಗಿತ್ತು. 1997 ರಲ್ಲಿ ಹೆಕ್ಟೇರ್ ಗೆ 5 ಸಾವಿರ ರೂ. ಅಂತ ನಿಗದಿ ಮಾಡಲಾಗಿತ್ತು.

ಆ ಪ್ರಕಾರ ಲೀಸ್ ಹಣ ಬಾಕಿ ಉಳಿಸಿಕೊಂಡ ಕಂಪನಿಗಳಿಂದ ಭೂಮಿ ವಾಪಸ್ ಪಡೆಯಲಾಗುತ್ತದೆ ಎಂದು ಹೇಳಿದರು.

ವಿರಾಜಪೇಟೆಯ ಮರ್ಕೆರಾ ಕಂಪನಿ 1,575 ಎಕರೆ ಭೂಮಿಯನ್ನು ಲೀಸ್ಗೆ ಪಡೆದುಕೊಂಡಿದ್ದು, ಥಾಮ್ಸನ್ ರಬ್ಬರ್ ಲಿ. 625 ಎಕರೆ ಗುತ್ತಿಗೆ ಪಡೆದಿದ್ದು, 2015 ರವರೆಗೆ 91.29 ಕೋಟಿ ರೂ. ಪಾವತಿಸಬೇಕಿದೆ. ನಿಲಂಬೂರ್ ರಬ್ಬರ್ ಕಂಪನಿ ಲಿಮಿಟೆಡ್ 713 ಎಕರೆ ಗುತ್ತಿಗೆ ಪಡೆದಿದ್ದು, 130.22 ಕೋಟಿ ರೂ. ಪಾವತಿಸಬೇಕಿದೆ.

ಪೋರ್ಟ್ ಲ್ಯಾಂಡ್ ರಬ್ಬರ್ ಎಸ್ಟೇಟ್ ಲಿಮಿಟೆಡ್ 1288 ಎಕರೆ ಗುತ್ತಿಗೆ ಪಡೆದಿದ್ದು 2022 ರವರೆಗೆ 536.66 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ.



ಗ್ಲೆನ್ ಲಾರೆನ್ಸ್ ಪ್ರೈ.ಲಿ. ಮತ್ತು ಟಾಟಾ ಕಂಪನಿ 943 ಎಕರೆ ಅರಣ್ಯ ಭೂಮಿ ಗುತ್ತಿಗೆ ಪಡೆದಿದ್ದು, 524 ಕೋಟಿ ರೂ. ಬಾಕಿ ಪಾವತಿಸಿಬೇಕಿದೆ.

ಚಾಮರಾಜನಗರದ ಹೊನ್ನಮಟ್ಟಿ ನೀಲಗಿರಿ ಪ್ಲಾಂಟೇಷನ್ ಲಿ. ಮತ್ತಿತರರಿಂದ 2015 ರವರೆಗೆ 25.36 ಕೋಟಿ ರೂ. ಎಕರೆ ಭೂಮಿಯನ್ನು ಗುತ್ತಿಗೆಗೆ ಪಡೆದಿದೆ. ಒಟ್ಟಾರೆ ಎರಡು ಸಾವಿರ ಕೋಟಿ ರೂ.ಗೂ ಹೆಚ್ಚು ಲೀಸ್ ಹಣವನ್ನು ಕಂಪನಿಗಳು ಅರಣ್ಯ ಇಲಾಖೆಗೆ ಪಾವತಿ ಮಾಡಬೇಕಿದೆ. ಈ ಪೈಕಿ ಕೆಲವರು ಬಾಕಿ ಪಾವತಿಸುವ ಬದಲಿಗೆ ಕೋರ್ಟ್ ಮೊರೆ ಹೋಗಿದ್ದರು" ಎಂದು ತಿಳಿಸಿದರು.

'ಇದರಲ್ಲಿ ಥಾಮ್ಸನ್ ರಬ್ಬರ್ ಅರಣ್ಯ ಗುತ್ತಿಗೆ ಭೂಮಿಯನ್ನೇ ಬ್ಯಾಂಕ್ನಲ್ಲಿ ಅಡಮಾನ ಇಟ್ಟು ಸಾಲ ಪಡೆದಿದ್ದು, ಸಾಲ ಕಟ್ಟದ ಕಾರಣ ಬ್ಯಾಂಕ್ನವರು ಅದನ್ನು ಹರಾಜು ಹಾಕಿದ್ದಾರೆ. ಇದರ ಜೊತೆಗೆ ವಿರಾಜಪೇಟೆ ಒಂದರಿಂದಲೇ ಸಂಬಂಧಿಸಿದಂತೆ ಆಡಿಟ್ ವರದಿಯಲ್ಲಿ ಇಲಾಖೆಗೆ ಗುತ್ತಿಗೆ ಮೊತ್ತ 1,601 ಕೋಟಿ ರೂಪಾಯಿ ಬರಬೇಕು ಎಂದು ತಿಳಿಸಿದೆ. ಈ ಪೈಕಿ ಬಾಕಿ ಪಾವತಿಸುವಂತೆ ನೋಟಿಸ್ ನೀಡಿದ ಕೂಡಲೇ ಕೆಲವರು ನ್ಯಾಯಾಲಯಕ್ಕೆ ಹೋಗಿದ್ದು, ಕೆಲವು ಪ್ರಕರಣ ಬಾಕಿ ಇದೆ. ಇದೆಲ್ಲ ಪ್ರಕರಣದಲ್ಲಿ ಕಾನೂನು ಹೋರಾಟ ನಡೆಸಲು ಒಂದು ವಿಶೇಷ ತಂಡ ರಚಿಸಲಾಗುವುದು.

ಗುತ್ತಿಗೆ ಪಡೆದಿರುವ ಕಂಪನಿಗಳಿಂದ ಬರಬೇಕಿರುವ ಬಾಕಿ ವಸೂಲಿಗೆ ಒಂದು ವಿಶೇಷ ಪಿಸಿಸಿಎಫ್ ಅಥವಾ ಎಪಿಸಿಸಿಎಫ್ ದರ್ಜೆಯ ಅಧಿಕಾರಿಗೆ ಇದರ ಹೊಣೆ ನೀಡಲಾಗುವುದು.

ಒಂದು ವರ್ಷದಲ್ಲಿ ಈ ಎಲ್ಲ ಬಾಕಿ, ದಂಡ ಶುಲ್ಕ ಮತ್ತು ಬಡ್ಡಿ ಸಹಿತ ಬಾಕಿ ವಸೂಲಿ ಮಾಡಲು ಕ್ರಮ ವಹಿಸಲಾಗುವುದು" ಎಂದು ಹೇಳಿದರು.

ಮರ ಕಡಿದ ಪ್ರಕರಣದಲ್ಲಿ ಸಂಸದ ಪ್ರತಾಪ್ ಸಿಂಹ ಸಹೋದರ ವಿಕ್ರಮ್ ಸಿಂಹ ಅವರನ್ನು ಬಂಧಿಸಲಾಗಿತ್ತು.

ಸಆದರೆ, ಅವರ ಹೆಸರು ಎಫ್‌ಐಆರ್‌ನಲ್ಲಿ ಇಲ್ಲದಿರುವುದು ಮೈಸೂರು ಜಿಲ್ಲೆಯಲ್ಲಿ ರಾಜಕೀಯ ಕೆಸರೆರಚಾಟ ನಡೆಯುತ್ತಿದೆ. ಪ್ರಕರಣದ ಬಗ್ಗೆ ಮಾತನಾಡಿದ ಸಚಿವರು, ಈ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ, ನನ್ನ ಪ್ರಭಾವ ಇರುವುದಿಲ್ಲ" ಎಂದರು.

ವಿರಾಜಪೇಟೆಯಲ್ಲಿ ಮರ ಕಡಿದ ಬಗ್ಗೆ ಆರೋಪ ಇದೆ. ಕಾನೂನು ಕ್ರಮ ಜರುಗಿಸಿ ಡಿಸಿಎಫ್ ಅಮಾನತು ಮಾಡಿದೆ. ಹಿಂದಿನ ಸರ್ಕಾರದಲ್ಲಿ ಆದಂತಹ ಪಾಪದ ಕೆಲಸಗಳನ್ನ ನಾವು ತೊಳೆಯುತ್ತಿದ್ದೇವೆ. ತರೀಕೆರೆಯಲ್ಲಿ ಮರ ಕಡಿದ ಆರೋಪ ಇದೆ. ಮೂವರನ್ನ ಅಮಾನತು ಮಾಡಿದ್ದೇವೆ. ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಅವರು ಸುದ್ದಿಗೋಷ್ಠಿ ಮಾಡುವ ಮೊದಲೇ ನಾವೂ ಕ್ರಮ ಕೈಗೊಂಡಿದ್ದೇವೆ. ಪಾಪ ಅವರಿಗೆ ಮಾಹಿತಿ ಇಲ್ಲಾ ಅನಿಸುತ್ತದೆ" ಎಂದು ಸಚಿವರು ಸವಾಲು ಹಾಕಿದ್ದಾರೆ.

### ಗಣರಾಜ್ಯೋತ್ಸವ: ಪೂರ್ವಭಾವಿ ಸಭೆ

# ಸಂಭ್ರಮದ ಆಚರಣೆ: ಪೂರ್ವ ಸಿದ್ಧತೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಸರ್ಕಾರದ ಮಾರ್ಗಸೂಚಿ ಅನ್ವಯ ಪ್ರತಿ ವರ್ಷದಂತೆ ಜನವರಿ 26 ರಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಗಣರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಗುವುದು. ಸಂಬಂಧಿಸಿದ ಇಲಾಖೆಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಬುಧವಾರ (ಜ.10) ನಡೆದ ಗಣರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ಬಾರಿಯಂತೆ ಜನವರಿ 26 ರಂದು ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ ನೆರವೇರಿಸಲಾಗುವುದು. ಎಲ್ಲಾ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಧ್ವಜಾರೋಹಣ ಸಮಯದಲ್ಲಿ ಕಡ್ಡಾಯವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಿರಬೇಕು ಎಂದು ತಿಳಿಸಿದರು.

ಪೊಲೀಸ್ ಇಲಾಖೆ, ಅಗ್ನಿಶಾಮಕ, ಕೆ.ಎಸ್.ಆರ್. ಪಿ, ಎನ್.ಸಿ.ಸಿ, ಸ್ಕೌಟ್ಸ್ ಮತ್ತು ಗೈಡ್ಸ್ ಸೇರಿದಂತೆ ಪರೇಡ್ ನಲ್ಲಿ ಭಾಗವಹಿಸುವವರು ಪೂರ್ವ ತಯಾರಿ ಮಾಡಿಕೊಳ್ಳಬೇಕು. ಕೆ.ಎಂ.ಎಫ್ ಹಾಗೂ ಮಿಠಾಯಿ ಅಸೋಸಿಯನ್ ವತಿಯಿಂದ ಪರೇಡ್ ನಲ್ಲಿ ಭಾಗವಹಿಸಿದ ಎಲ್ಲಾ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಮಿಠಾಯಿ ಹಂಚಿಕೆ ಮಾಡಬೇಕು ಎಂದು ತಿಳಿಸಿದರು.

ವೇದಿಕೆಯ ಸಿದ್ಧತೆ, ಆಸನ, ಧ್ವನಿವರ್ಧಕ, ಕುಡಿಯುವ ನೀರು ಮತ್ತಿತರ ಮೂಲಸೌಕರ್ಯವನ್ನು ಒದಗಿಸಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ವ್ಯವಸ್ಥೆ ಮಾಡಿಕೊಳ್ಳಬೇಕು.

ನಗರದ ಪ್ರಮುಖ ವೃತ್ತಗಳನ್ನು ಸ್ವಚ್ಛಗೊಳಿಸಿ ದೀಪಾಲಂಕಾರ ಮಾಡಬೇಕು ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಹೇಳಿದರು.



ಜಿಲ್ಲೆಯ ಎಲ್ಲ ದೇವಾಲಯ, ಮಂದಿರಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲು ಕ್ರಮಕೈಗೊಳ್ಳುವಂತೆ ಮುಜರಾಯಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರಿ ಕಚೇರಿಗಳಿಗೂ ಕೂಡ ದೀಪಾಲಂಕಾರ ಮಾಡಬೇಕು. ಸಾರ್ವಜನಿಕರು ತಮ್ಮ ಮನೆ, ಅಂಗಡಿ–ಮುಂಗಟ್ಟುಗಳು, ವಾಣಿಜ್ಯ ಸಂಕೀರ್ಣಗಳನ್ನು ಅಲಂಕಾರ ಮಾಡಬೇಕು ಎಂದು ತಿಳಿಸಿದರು.

ಗಣರಾಜ್ಯೋತ್ಸವ ದಿನ ಆಸಕ್ತ ಸಂಘ–ಸಂಸ್ಥೆಗಳು ಆಸ್ಪತೆಯ ರೋಗಿಗಳಿಗೆ, ವೃದ್ಧಾಶ್ರಮ, ಅನಾಥಾಶ್ರಮಗಳಿಗೆ ಹಣ್ಣುಗಳನ್ನು ಹಂಚಬಹುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

**ರಾಯಣ್ಣ ಮೂರ್ತಿ ಸ್ಥಳಾಂತರಕ್ಕೆ ಮನವಿ:**

ಚನಮ್ಮನ ವಿಜಯೋತ್ಸವದ 200ನೇ ವರ್ಷಾಚರಣೆ ಮಾಡಲಾಗುತ್ತಿದೆ. ನಗರದಲ್ಲಿ ಸಂಗೊಳ್ಳಿ ರಾಯಣ್ಣ ವೃತ್ತ, ರಸ್ತೆ, ಮೂರ್ತಿ ಬೇರೆ ಬೇರೆ ಸ್ಥಳಗಳಲ್ಲಿವೆ.

**ಪ್ಲಾಸ್ಟಿಕ್ ಧ್ವಜಗಳ ಮಾರಾಟ ನಿಷೇಧ ಜಿಲ್ಲಾಧಿಕಾರಿ ಸೂಚನೆ**

ಬೆಳಗಾವಿ: ಗಣರಾಜ್ಯೋತ್ಸವ ಸಂದರ್ಭದಲ್ಲಿ ಪ್ಲಾಸ್ಟಿಕ್ ಧ್ವಜಗಳ ಮಾರಾಟವನ್ನು ನಿಷೇಧಿಸಲಾಗಿರುತ್ತದೆ.ಪ್ಲಾಸ್ಟಿಕ್ ಧ್ವಜಗಳ ಮಾರಾಟ ಕಂಡುಬಂದಲ್ಲಿ ಅವುಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ಕೋರ್ಟ್ ಆವರಣದ ಹಿಂಬದಿಯಲ್ಲಿರುವ ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಅವರ ಮೂರ್ತಿ ಪ್ರಾದೇಶಿಕ ಆಯುಕ್ತರ ಕಚೇರಿಯ ಮುಂದೆ ಸ್ಥಳಾಂತರ ಮಾಡಬೇಕು ಎಂದು ಮುಖಂಡರಾದ ಶ್ರೀನಿವಾಸ ತಾಳೂರಕರ ಮನವಿ ಮಾಡಿಕೊಂಡರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಮುಂದಿನ ದಿನಗಳಲ್ಲಿ ರಸ್ತೆ ನಿರ್ಮಾಣ, ಫ್ಲೇ ಓವರ್, ಹೊಸ ಜಿಲ್ಲಾಡಳಿತ ಕಟ್ಟಡ ಸೇರಿದಂತೆ ವಿವಿಧ ಯೋಜನೆಗಳು ರೂಪಿಸಲಾಗಿದೆ.

ಇದಕ್ಕೆ ಅನುಗುಣವಾಗಿ ಮುಂದೆ ಈ ಕುರಿತು ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಕಳೆದ ಬಾರಿಯಂತೆ ಪರೇಡ್ ನಲ್ಲಿ ಭಾಗವಹಿಸಿದವರಿಗೆ ಎಲ್ಲರಿಗೂ ಪ್ರಮಾಣ ಪತ್ರ ವಿತರಣೆ ಮಾಡಲಾಗುವುದು. ಸಮೀಪದ ಶಾಲಾ ಕಾಲೇಜು ಮಕ್ಕಳು ಜಿಲ್ಲಾ ಕ್ರೀಡಾಂಗಣದಲ್ಲಿ ಆಚರಿಸಲಿರುವ ಗಣರಾಜ್ಯೋತ್ಸವದಲ್ಲಿ ಭಾಗವಹಿಸುವಂತೆ ಸಂಭಂದಿಸಿದ ಶಾಲಾ ಮುಖ್ಯೋಪಾಧ್ಯಾಯರಿಗೆ ಸೂಚಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

## ನೀರು ಪೂರೈಕೆಯಲ್ಲಿ ವ್ಯತ್ಯಯ

ಬೆಳಗಾವಿ: ಬಸವನಕೊಳ್ಳದಿಂದ ಲಕ್ಷ್ಮಿಟೆಕ್‌ಗೆ ಸರಬರಾಜಾಗುವ ಕಚ್ಚಾ ನೀರಿನ 711ಎಂ.ಎಂ ಎಮ್.ಎಸ್ ಪೈಪ್ ಲೈನ್‌ನಲ್ಲಿ ಜೆಎನ್‌ಎಂಸಿ, ಕೆಎಲ್‌ಇ, ಡಿಮಾರ್ಟ್, ನೆಹರು ನಗರದಲ್ಲಿ ಸೋರಿಕೆಯಾಗಿರುವುದರಿಂದ, ಹಾಗೂ ಲಕ್ಷ್ಮಿಟೆಕ್ ದಿಂದ ಗಾರ್ಡನ್ ಲೈನ್ 450 ಎಂಎಂ ಪೈಪ್ ಲೈನ್ ರಾಣಿ ಚೆನ್ನಮ್ಮ ಸರ್ಕಲ್‌ದಲ್ಲಿ ಸೋರಿಕೆಯಾಗಿರವುದರಿಂದ ಮತ್ತು ಖನಗಾಂವದಲ್ಲಿ ಏರ್‌ವಾಲ್ವ ರಿಪೇರಿಯಿರುವುದರಿಂದ ಜನೆವರಿ 10ರಂದು ದುರಸ್ಥಿ ಕೈಗೊಳ್ಳುವುದರಿಂದ ದಿನಾಂಕ 10 ರಿಂದ 12ನೇ ಜನೇವರಿ 2024 ರವರೆಗೆ ಬೆಳಗಾವಿ ನಗರಕ್ಕೆ ನೀರು ಸರಬರಾಜು ಮಾಡುವಲ್ಲಿ ವ್ಯತ್ಯಯ ಉಂಟಾಗಲಿದೆ.

ಬೆಳಗಾವಿ ನಗರಕ್ಕೆ ಸರಬರಾಜಾಗುವ ಕಚ್ಚಾ ನೀರಿನ ಕೊಳವೆಯಲ್ಲಿ ಸೋರಿಕೆವುಂಟಾಗಿರುವುದರಿಂದ ಮತ್ತು ಏರ್‌ವಾಲ್ವ ರಿಪೇರಿಯಿರುವುದರಿಂದ ತುರ್ತಾಗಿ ಜ.10ರಂದು ದುರಸ್ಥಿ ಕಾರ್ಯ ಕೈಗೊಳ್ಳುವ ಹಿನ್ನೆಲೆಯಲ್ಲಿ ಬೆಳಗಾವಿ ನಗರದ 24*7 ಆೃಕ್ಷಿಕ ವಲಯ ಸೇರಿ ನಗರದ ಕೆಳಕಂಡ ಪ.ದೇಶಗಳಲಿ ಜ.10 ಮತು 12ರಂದು ನೀರು ವ್ಯತ್ಯಯವಾಗಲಿದೆ.


## ನವ ವರುಷದ ನಗೆಯಾಟ



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಸಾಹಿತ್ಯಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 13 ಶನಿವಾರ ಸಾ. 4–30 ಕ್ಕೆ "ನವ ವರುಷದ ನಗೆಯಾಟ" ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಹೊಸ ವರ್ಷದ ಮೊದಲ ಈ ಕಾರ್ಯಕ್ರಮದಲ್ಲಿ ಯಾರೂ ಭಾಗವಹಿಸಿ ತಮ್ಮ ಮಾತುಗಳಿಂದ ಜನರನ್ನು ರಂಜಿಸಬಹುದಾಗಿದೆ. ಅಧ್ಯಕ್ಷತೆಯನ್ನು ಹಿರಿಯ ಲೇಖಕರಾದ ಪ್ರೊ. ಬಸವರಾಜ ಗವಿಮಠ ಇವರು ವಹಿಸಿಲಿದ್ದು ಪ್ರಾಯೋಜಕತ್ವವನ್ನು ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷರಾದ ಶ್ರೀಮತಿ ಜಯಶೀಲಾ ಬ್ಯಾಕೋಡ ವಹಿಸಿಕೊಂಡಿದ್ದಾರೆ. ಪ್ರೊ. ಜಿ. ಕೆ. ಕುಲಕರ್ಣಿ, ಜಿ. ಎಸ್. ಸೋನಾರ, ಎಂ. ಬಿ. ಹೊಸಳ್ಳಿ, ಅರವಿಂದ ಹುನಗುಂದ, ಉಪಸ್ಥಿತರಿರಲಿದ್ದು ಕೆ. ತಾನಾಜಿ ನಿರೂಪಿಸಲಿದ್ದಾರೆ.

## ಒಂದೇ ಕುಟುಂಬದ ಮೂವರನ್ನು ಗುಂಡಿಟ್ಟು ಹತ್ಯೆ : ಬೆಚ್ಚಿಬಿದ್ದ ಗ್ರಾಮಸ್ಥರು



ಬಿಹಾರ: ಮರ್ಯಾದಾ ಹತ್ಯೆಯೊಂದು ದೇಶವನ್ನೇ ಬೆಚ್ಚಿಳಿಸಿರುವ ಸುದ್ದಿಯಾಗಿದೆ. 2 ವರ್ಷದ ಅಮಾಯಕ ಮಗು ಸೇರಿ ಒಂದೇ ಕುಟುಂಬದ ಮೂವರನ್ನು ಗುಂಡಿಟ್ಟು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ನೌಗಾಚಿಯಾ ಜಿಲ್ಲೆಯ ಗೋಪಾಲ್ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೃತ್ಯ ನಡೆದಿದೆ.

ಚಂದನ್ (40), ಚಾಂದಿನಿ (23) ರೋಶ್ನಿ (2) ಕೊಲೆಯಾದ ದುರ್ದೈವಿಗಳು. ಚಂದನ್ ಮತ್ತು ಚಾಂದಿನಿ ಪ್ರೀತಿಸುತ್ತಿದ್ದು, ಕಳೆದ ಮೂರು ವರ್ಷಗಳ ಹಿಂದೆ ಪ್ರೇಮ ವಿವಾಹ ಆಗಿದ್ದರು. ಇದಕ್ಕೆ ಚಾಂದಿನಿ ಮನೆಯವರಿಂದ ತೀವ್ರ ವಿರೋಧ ಇತ್ತು. ಮದುವೆ ಆಗಿದ್ದ ಕಾರಣಕ್ಕೆ ಕೊಲೆ ಮಾಡಿ ಸೇಡು ತೀರಿಸಿಕೊಂಡಿದ್ದಾರೆ ಎನ್ನಲಾಗುತ್ತಿದೆ.

ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳ ಬಂಧನಕ್ಕೆ ತಂಡ ರಚಿಸಲಾಗಿದೆ.

## ಲಾರಿ ಹರಿದು ಒಂಭತ್ತು ಕುರಿ ಸಾವು



ರಾಯಚೂರು: ಲಾರಿ ಹರಿದು 9 ಕುರಿಗಳು ಧಾರುಣ ಅಂತ್ಯಗೊಂಡ ಘಟನೆ ಸಮೀಪದ ಹೈದರಾಬಾದ್ ಮುಖ್ಯ ರಸ್ತೆಯ ಯರಮರಸ್ ಬೈಪಾಸ್ ಬಳಿ ಬುಧವಾರ ಬೆಳಗ್ಗೆ ನಡೆದಿದೆ.

11 ಕುರಿಗಳು ಗಂಭೀರ ಗಾಯಗೊಂಡಿವೆ. ಬೈಕ್ ಲಾರಿಯಡಿ ಸಿಲುಕಿದ್ದು, ಸವಾರನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಗ್ರಾಮೀಣ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಲಾರಿ ಮತ್ತು ಲಾರಿ ಚಾಲಕನನ್ನು ವಶಕ್ಕೆ ಪಡೆಯಲಾಗಿದೆ. ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಅಸಮರ್ಪಕ ಘನ ತ್ಯಾಜ್ಯ ವಿಲೇವಾರಿ ದೂರು; ಖುದ್ದು ಪರಿಶೀಲನೆ ನಡೆಸಿದ ಲೋಕಾಯುಕ್ತ

ಬೆಂಗಳೂರು: ಲೋಕಾಯುಕ್ತ ನ್ಯಾಯಮೂರ್ತಿ ಬಿ ಎಸ್ ಪಾಟೀಲ್ ಮತ್ತು ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ ಎನ್ ಫಣೀಂದ್ರ ಅವರು ಬೆಂಗಳೂರು ಉತ್ತರ ಮತ್ತು ದಕ್ಷಿಣ ಭಾಗದ ಪ್ರದೇಶಗಳಿಗೆ ಮಂಗಳವಾರ ದಿಢೀರ್ ಭೇಟಿ ನೀಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ)ಯಿಂದ ಕಸ ವಿಲೇವಾರಿ ಮತ್ತು ಘನತ್ಯಾಜ್ಯ ನಿರ್ವಹಣೆಯಲ್ಲಿ ಅಕ್ರಮಗಳನ್ನು ಪರಿಶೀಲಿಸಿದರು.

ನಗರದಲ್ಲಿನ ಅಸಮರ್ಪಕ ಘನ ತ್ಯಾಜ್ಯ ವಿಲೇವಾರಿ ಮತ್ತು ವಿಲೇವಾರಿಯಲ್ಲಿ ಅಕ್ರಮಗಳ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಖುದ್ದು ಲೋಕಾಯುಕ್ತ ಮತ್ತು ಉಪಲೋಕಾಯುಕ್ತರು ಮಂಗಳವಾರ ನಗರದ ವಿವಿಧೆಡೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್ ಮತ್ತು ಉಪಲೋಕಾಯುಕ್ತ ನ್ಯಾ.ಕೆ.ಎನ್.ಪಣೀಂದ್ರ ಅವರು



ಪ್ರತ್ಯೇಕ ಸ್ಥಳಗಳಿಗೆ ದಿಢೀರ್ ಭೇಟಿ ನೀಡಿದರು.

ಈ ವೇಳೆ ಶಾಲೆ ಮತ್ತು ಆಸ್ಪತ್ರೆ ಮುಂದೆ ಬಿದ್ದಿರುವ ಕಸ ಹಾಗೂ ಘನ ತ್ಯಾಜ್ಯವಿಲೇವಾರಿ ಘಟಕಗಳಲ್ಲಿನ ಅವ್ಯವಸ್ಥೆ ಕಂಡು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಗರಂ ಆಗಿ ಸ್ವಚ್ಛತೆ ಕಾಪಾಡುವಲ್ಲಿ ವಿಫಲವಾದ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಸಿ ತರಾಟೆ ತೆಗೆದುಕೊಂಡರು.

**ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ ಎನ್ ಫಣೀಂದ್ರ**

ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್ ಅವರು ಬೆಂಗಳೂರು ಉತ್ತರ ಭಾಗದ ಹೆಬ್ಬಾಳ, ಯಲಹಂಕ, ಎಂ.ಎಸ್.ಪಾಳ್ಯ, ದಾಸರಹಳ್ಳಿ ಸೇರಿದಂತೆ ಇತರೆ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇನ್ನು, ಉಪಲೋಕಾಯುಕ್ತ ನ್ಯಾ. ಕೆ.ಎನ್.ಫಣಿಂದ್ರ ಅವರು ಬೆಂಗಳೂರು ದಕ್ಷಿಣ ಭಾಗದ ಆಸ್ಟಿನ್‌ಟೌನ್, ಆನೇಪಾಳ್ಯ, ನಿಮ್ಹಾನ್ಸ್, ಸಂಜಯ್‌ಗಾಂಧಿ ಆಸ್ಪತ್ರೆಯ ಸುತ್ತಮುತ್ತಲ ಪ್ರದೇಶ, ಬನಶಂಕರಿ 6ನೇ ಹಂತದ ಲಿಂಗಧೀರನಹಳ್ಳಿಯಲ್ಲಿನ ಘನತ್ಯಾಜ್ಯ ವಿಲೇವಾರಿ ಘಟಕಗಳಿಗೆ ಭೇಟಿ ನೀಡಿದರು. ಈ ವೇಳೆ ಸಾರ್ವಜನಿಕರು ಅನುಭವಿಸುತ್ತಿರುವ ಸಮಸ್ಯೆಗಳ ಕುರಿತು ಖುದ್ದು ಪರಿಶೀಲನೆ ನಡೆಸಿದರು.

ಘಟಕಗಳಲ್ಲಿನ ಅವ್ಯವಸ್ಥೆಗಳನ್ನು ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. ಕಸದ ವಾಹನಗಳನ್ನು ಸ್ವಚ್ಛತೆಯಿಂದ ಕಾಪಾಡಿಕೊಳ್ಳುವಂತೆ ನಿರ್ದೇಶನ ನೀಡಲಾಯಿತು.

ಅಲ್ಲದೇ, ವಿಲೇವಾರಿಯಲ್ಲಿ ಕೆಲವು ಅಕ್ರಮಗಳ ನಡೆಯುತ್ತಿರುವ ಬಗ್ಗೆ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಪ್ರಶ್ನಿಸಿ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

ಸ್ಥಳಕ್ಕೆ ಬಿಬಿಎಂಪಿ ಜಂಟಿ ಆಯುಕ್ತರನ್ನು, ಜಿಲ್ಲಾ ಪಂಚಾಯತ್ ಸಿಇಒ ಅವರನ್ನು ಕರೆಸಿ ಆದಷ್ಟು ಬೇಗ ಸ್ವಚ್ಛಗೊಳಿಸಿ ವರದಿ ಸಲ್ಲಿಸುವಂತೆ ಸೂಚಿಸಲಾಯಿತು.

ಈ ಸಂಬಂಧ ಲೋಕಾಯುಕ್ತ ಕಚೇರಿಗೆ ಬುಧವಾರ ವಿಚಾರಣೆಗೆ ಹಾಜರಾಗುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

## ಬೆಂಗಳೂರು: ವೇಶ್ಯಾವಾಟಿಕೆ ದಂಧೆ; ಕಿಂಗ್ ಪಿನ್ ಟರ್ಕಿ ಮಹಿಳೆ ಸೇರಿ 9 ಮಂದಿ ಬಂಧನ

ಬೆಂಗಳೂರು: ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ವಿದೇಶಿ ಮಹಿಳೆ ಸೇರಿ 9 ಆರೋಪಿಗಳನ್ನು ಪೂರ್ವವಿಭಾಗದ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಪುಲಕೇಶಿನಗರದಲ್ಲಿ ವಾಸವಾಗಿದ್ದ ಟರ್ಕಿ ದೇಶದ ಬಿಯೋನಾಜ್ ಸ್ವಾಮಿಗೌಡ (39), ಆಕೆಯ ಸಹಚರರಾದ ಒಡಿಶಾದ ಜಿತೇಂದ್ರ ಸಾಹು(43), ಪ್ರಮೋದ್ ಕುಮಾರ್(31), ಮನೋಜ್ ದಾಸ್(23) ಅಸ್ಸಾಂನ ಸೌಮಿತ್ರ ಚಂದ್(26), ಮಹಾಲಕ್ಷ್ಮೀ ಲೇಔಟ್ ನಿವಾಸಿ ಪ್ರಕಾಶ್(32), ಲಗ್ಗೆರೆಯ ವೈಶಾಕ್(22), ಪರಪ್ಪನ ಅಗ್ರಹಾರ ನಿವಾಸಿ ಗೋವಿಂದರಾಜ್(34) ಮತ್ತು ನಂದಿನಿಲೇಔಟ್ ನಿವಾಸಿ ಅಕ್ಷಯ್(32) ಬಂಧಿತರು.

'ಪ್ರಕರಣದ ಕಿಂಗ್ ಪಿನ್ ಆಗಿರುವ ಬಿಯೋನಾಜ್ 15 ವರ್ಷಗಳ ಹಿಂದೆ ಟರ್ಕಿಗೆ ಬಂದಿದ್ದ ಉದ್ಯಮಿ ರೋಹಿತ್ ಸ್ವಾಮಿಗೌಡ ಎಂಬಾತನನ್ನು ಪ್ರೀತಿಸಿ ಮದುವೆಯಾಗಿದ್ದಳು. ಬಳಿಕ



ಬೆಂಗಳೂರಿಗೆ ಬಂದು ಪೀಣ್ಯದಲ್ಲಿ ಕುಟುಂಬ ಸಮೇತ ವಾಸವಾಗಿದ್ದರು. ಕೆಲ ವರ್ಷಗಳ ಹಿಂದೆ ರೋಹಿತ್ ಸ್ವಾಮಿಗೌಡ ಮೃತಪಟ್ಟಿದ್ದರು.

ನಂತರ ಬಿಯೋನಾಜ್, ಪುಲಕೇಶಿನಗರದಲ್ಲಿ ಎರಡು ಫ್ಲ್ಯಾಟ್ ಖರೀದಿಸಿದ್ದಳು. ಮಧ್ಯವರ್ತಿಗಳ ಮೂಲಕ ವಿದೇಶದ ಮಹಿಳೆಯರನ್ನು ಬೆಂಗಳೂರಿಗೆ ಕರೆಸಿ ವೇಶ್ಯಾವಾಟಿಕೆ ದಂಧೆಗೆ ದೂಡುತ್ತಿದ್ದಳು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

2023ರ ಡಿ.19ರಂದು ಹಲಸೂರು ಠಾಣೆ ವ್ಯಾಪ್ತಿಯ ದೊಮ್ಮಲೂರಿನಲ್ಲಿರುವ ದಿ ಲೀಲಾ ಪಾರ್ಕ್ ಹೋಟೆಲ್‌ನಲ್ಲಿ ವೇಶ್ಯಾವಾಟಿಕೆ ದಂಧೆ ನಡೆಯುತ್ತಿದೆ ಎಂಬ ಮಾಹಿತಿ ಮೇರೆಗೆ ಹಲಸೂರು ಠಾಣೆ ಇನ್‌ಸ್ಪೆಕ್ಟರ್ ದಾಳಿ ನಡೆಸಿ ಜಿತೇಂದ್ರ ಸಾಹೂ, ಪ್ರಮೋದ್ ಕುಮಾರ್, ಸೌಮಿತ್ರ ಚಂದ್, ಮನೋಜ್‌ನನ್ನು ಬಂಧಿಸಿದ್ದರು. ಬಳಿಕ ಹೆಚ್ಚಿನ ತನಿಖೆಗಾಗಿ ಪ್ರಕರಣವನ್ನು ಬೈಯಪ್ಪನಹಳ್ಳಿ ಠಾಣೆಗೆ ವರ್ಗಾಹಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸರು, ವೈಶಾಕ್ ಎಂಬಾತನನ್ನು ಬಂಧಿಸಲಾಗಿತ್ತು.

ವಿಚಾರಣೆ ವೇಳೆ ಆರೋಪಿ ವೈಶಾಕ್‌ನ ವಾಟ್ಸ್ಆ್ಯಪ್ ಮತ್ತು ಟೆಲಿಗ್ರಾಂನಲ್ಲಿ 'ಬೆಂಗಳೂರು ಡೇಟಿಂಗ್ ಕ್ಲಬ್' ಎಂಬ ಗ್ರೂಪ್ ಮೂಲಕ ಗ್ರಾಹಕರನ್ನು ಸೆಳೆದು ದಂಧೆ ನಡೆಸುತ್ತಿರುವುದು ಬೆಳಕಿಗೆ ಬಂದಿದೆ. ಅಲ್ಲದೆ, ವಿದೇಶಿ ಮಹಿಳೆಯರು ಹಾಗೂ ನೆರೆ ರಾಜ್ಯದ ಮಹಿಳೆಯರನ್ನು ವೇಶ್ಯಾವಾಟಿಕೆ ದಂಧೆಯಲ್ಲಿ ತೊಡಗಿಸಿರುವುದು ಪತ್ತೆಯಾಗಿತ್ತು.

ಬಳಿಕ ಈ ಮಹಿಳೆಯರ ವಿಚಾರಣೆಯಲ್ಲಿ ಬಿಯೋನಾಜ್ ಸ್ವಾಮಿಗೌಡ ದಂಧೆಯ ರೂವಾರಿ ಎಂಬುದು ಖಾತ್ರಿಯಾಗಿ, ಆಕೆಯನ್ನು ಬಂಧಿಸಲಾಗಿದೆ.

ಬಳಿಕ ಈಕೆಯ ವಶದಲ್ಲಿದ್ದ ಖಜಕಿಸ್ತಾನ, ಉಜಕಿಸ್ತಾನ, ಬಾಂಗ್ಲಾದೇಶ, ಉಜ್‌ಬೇಕಿಸ್ತಾನ ದೇಶಗಳ 7 ಮಂದಿ ವಿದೇಶಿ ಮಹಿಳೆಯರನ್ನು ರಕ್ಷಿಸಿ, ಎಲ್ಲರನ್ನು ವಿದೇಶಿ ಪ್ರಾದೇಶಿಕ ನೊಂದಣಿ ಕಚೇರಿ (ಎಫ್‌ಆರ್‌ಆರ್‌ಒ) ಅಧಿಕಾರಿಗಳ ಮುಂದೆ ಹಾಜರು ಪಡಿಸಲಾಗಿದೆ.

ಈ ಪೈಕಿ ಇಬ್ಬರ ವಿರುದ್ಧ ಪಾಸ್‌ಪೋರ್ಟ್ ನಿಯಮ ಉಲ್ಲಂಘನೆ ಆರೋಪದಡಿ ಪ್ರಕರಣ ದಾಖಲಾಗಿದೆ. ಇತರೆ ಇಬ್ಬರಿಗೆ ನೋಟಿಸ್ ನೀಡಿದ್ದು, ಮಹಿಳೆಯರು ಸದ್ಯದಲ್ಲೇ ತಮ್ಮ ದೇಶಕ್ಕೆ ತೆರಳಿದ್ದಾರೆ. ಇನ್ನು ಪಶ್ಚಿಮ ಬಂಗಾಳ ಮತ್ತು ಉತ್ತರ ಪ್ರದೇಶ ಮೂಲದ ಮಹಿಳೆಯರಿಗೆ ಎಚ್ಚರಿಕೆ ನೀಡಿ ಕಳುಹಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸೀಮಂತ ಶಾಸ್ತ್ರ ಕಾರ್ಯಕ್ರಮದಲ್ಲಿ ದಂಪತಿಯಿಂದ ಭ್ರೂಣ ಹತ್ಯೆ ವಿರೋಧಿ ಅಭಿಯಾನ, ವ್ಯಾಪಕ ಮೆಚ್ಚುಗೆ



ಕೊಪ್ಪಳ: ದಂಪತಿ ಸೀಮಂತ ಶಾಸ್ತ್ರ ಕಾರ್ಯಕ್ರಮದಲ್ಲಿ ಹೆಣ್ಣು ಭ್ರೂಣ ಹತ್ಯೆಯ ವಿರುದ್ಧ ಅಭಿಯಾನ ನಡೆಸಿದ ಫೋಟೋ ವೀಡಿಯೊಗಳು ವೈರಲ್ ಆಗಿದ್ದು, ಅವರ ಪ್ರಯತ್ನ ವ್ಯಾಪಕ ಮೆಚ್ಚುಗೆ ಪಡೆದಿದೆ. ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ಕಡೇಕೊಪ್ಪ ಗ್ರಾಮದ ನಿಂಗಪ್ಪ ಜಿಗೇರಿ ಮತ್ತು ಅವರ ಪತ್ನಿ ರೇಖಾ ಜಿಗೇರಿ ದಂಪತಿ ತಮ್ಮ ಮನೆಯಲ್ಲಿ ಸೀಮಂತ ಕಾರ್ಯಕ್ರಮ ಸಂದರ್ಭದಲ್ಲಿ ಭ್ರೂಣ ಹತ್ಯೆಯ ವಿರುದ್ಧ ಪೋಸ್ಟರ್‌ಗಳನ್ನು ಹಾಕಿ ಸ್ನೇಹಿತರು ಮತ್ತು ಕುಟುಂಬಸ್ಥರಲ್ಲಿ ಜಾಗೃತಿ ಮೂಡಿಸಿದರು. ಭ್ರೂಣಹತ್ಯೆ ಅತ್ಯಂತ ಕೆಟ್ಟ ಅಪರಾಧ ಎಂದು ಪೋಸ್ಟರ್‌ಗಳಲ್ಲಿ ಬರೆಯಲಾಗಿದೆ. ಉತ್ತರ ಕರ್ನಾಟಕ ಪ್ರದೇಶದ ಅತ್ಯಂತ ಹಿಂದುಳಿದ ಜಿಲ್ಲೆಗಳಲ್ಲಿ ಕೊಪ್ಪಳ ಜಿಲ್ಲೆಯ ಈ ದಂಪತಿ ಕಾರ್ಯಕ್ರಮ ಆ ಪ್ರದೇಶದ ಕಾರ್ಯಕರ್ತರು ಮತ್ತು ಜನರ ಮೆಚ್ಚುಗೆಗೆ ಪಾತ್ರವಾಗಿದೆ. ಇತ್ತೀಚೆಗೆ, ಕರ್ನಾಟಕ ಪೊಲೀಸರು ಬೆಂಗಳೂರಿನಲ್ಲಿ ಸಂಚಲನ ಮೂಡಿಸಿದ ಭ್ರೂಣ ಹತ್ಯೆ ಪ್ರಕರಣವನ್ನು ಭೇದಿಸಿದ್ದು, ಆರೋಪಿಗಳು ಇದುವರೆಗೆ 3,000 ಹೆಣ್ಣು ಭ್ರೂಣಗಳನ್ನು ಗರ್ಭಪಾತ ಮಾಡಿದ್ದಾರೆ ಎಂಬ ಆಘಾತಕಾರಿ ಅಂಶ ಬೆಳಕಿಗೆ ಬಂದಿತ್ತು.

ಆರೋಪಿಗಳು ಇದುವರೆಗೆ 3 ಗರ್ಭಪಾತ ಮಾಡಿಸಿದ್ದಾರೆ. ಕಳೆದ ಮೂರು ತಿಂಗಳಲ್ಲಿ 242 ಹೆಣ್ಣು ಭ್ರೂಣಗಳನ್ನು ಕೊಲ್ಲಲಾಗಿದೆ ಎಂದು ತನಿಖೆಯಿಂದ ತಿಳಿದುಬಂದಿದೆ ಎಂದು ಬೆಂಗಳೂರು ಪೊಲೀಸ್ ಆಯುಕ್ತ ಬಿ ದಯಾನಂದ ಹೇಳಿದ್ದರು. ಪ್ರಕರಣ ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ.

## ಇದೇ ಮೊದಲ ಬಾರಿಗೆ ಶಬರಿಮಲೆ ಅಯ್ಯಪ್ಪ ಸ್ವಾಮಿ ದರ್ಶನ ಪಡೆದ ತೃತೀಯಲಿಂಗಿ ಮಹಿಳೆ

ಬೆಂಗಳೂರು: ಇದೇ ಮೊದಲ ಬಾರಿಗೆ ತೃತೀಯ ಲಿಂಗಿ ಮಹಿಳೆಯೊಬ್ಬರು ಶಬರಿಮಲೆ ಅಯ್ಯಪ್ಪ ಸ್ವಾಮಿ ದರ್ಶನ ಪಡೆಯುವ ಮೂಲಕ ಸುದ್ದಿಯಾಗಿದ್ದಾರೆ

ಶಬರಿಮಲೆ ಅಯ್ಯಪ್ಪನ ದರ್ಶನ ಪೂರ್ಣಗೊಳಿಸಿದ ಮೊದಲ 'ಟ್ರಾನ್ಸ್ಜೆಂಡರ್ ಮಹಿಳೆ' ರಿಯಾನಾ ರಾಜು, ವರ್ಷಗಳ ಹಿಂದೆ ಪುರುಷನಿಂದ ಹೆಣ್ಣಾಗಿ ಬದಲಾಗಿದ್ದಾರೆ. ಸತತ ಎಂಟು ಪ್ರಯತ್ನಗಳ ನಂತರ ನಾನು ಶಬರಿಮಲೆ ಅಯ್ಯಪ್ಪ ದರ್ಶನ ಪಡೆಯಲು ಯಶಸ್ವಿಯಾಗಿದ್ದೇನೆ ಎಂದು ಹೇಳಿದ್ದಾರೆ.

ರಿಯಾನಾ ಕೇರಳ ಸರ್ಕಾರದ ದೇವಸ್ವಂ ಬೋರ್ಡ್ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸುತ್ತಲೇ ಇದ್ದರು. ಶಬರಿ ಮಲೆ ಅಯ್ಯಪ್ಪಸ್ವಾಮಿ ದೇವಾಲಯಕ್ಕೆ ಪುರುಷರು ಮತ್ತು ಅಪ್ರಾಪ್ತರು ಹಾಗೂ ವಯಸ್ಕ ಮಹಿಳೆಯರು ಮಾತ್ರ ಪ್ರವೇಶಿಸಲು ಅನುಮತಿಯಿತ್ತು. ಸತತ ಪ್ರಯತ್ನದ ನಂತರ ತನ್ನ ಕನಸನ್ನು ನನಸಾಗಿಸುವ ಮೂಲಕ ಟ್ರಾನ್ಸ್‌ಜೆಂಡರ್ ಸಮುದಾಯಕ್ಕೆ ಮಾದರಿಯಾಗಿದ್ದಾರೆ.

ಇಲ್ಲಿಯವರೆಗೆ, ತೃತೀಯಲಿಂಗಿಗಳು ಪುರುಷನಂತೆ ಪೋಸ್ ನೀಡಬಹುದಿತ್ತು ಮತ್ತು ಪೈಜಾಮ ಮತ್ತು ಧೋತಿಗಳನ್ನು ಧರಿಸಬಹುದಿತ್ತು. ಆದರೆ ನಾನು ನನ್ನನ್ನು ತೃತೀಯಲಿಂಗಿ ಮಹಿಳೆ ಎಂದು ಘೋಷಿಸಿಕೊಂಡಿದ್ದೇನೆ.

ಇದಕ್ಕೆ ಸಂಬಂಧಿಸಿದ ಅಫಿಡವಿಟ್, ಮಹಿಳಾ ಮತ್ತು ಮಕ್ಕಳ ಇಲಾಖೆಯಿಂದ, ಉಪಮುಖ್ಯಮಂತ್ರಿ ಕಚೇರಿಯಿಂದ ಪತ್ರಗಳು ಮತ್ತು ತೃತೀಯ ಲಿಂಗಿಗಳ ಹಕ್ಕುಗಳನ್ನು ಗುರುತಿಸುವ ರಾಷ್ಟ್ರೀಯ ಕಾನೂನು ಸೇವಾ



ಪ್ರಾಧಿಕಾರದ ಶಿಫಾರಸುಗಳಂತಹ ಪೂರಕ ದಾಖಲೆಗಳನ್ನು ತೆಗೆದುಕೊಂಡಿದ್ದೇನೆ ಎಂದಿದ್ದಾರೆ.

ದೇವಸ್ಥಾನಕ್ಕೆ ಹೋಗುವ ದಾರಿಯಲ್ಲಿ, ರಿಯಾನಾ ತನ್ನ ಸ್ತ್ರೀ ವೇಷಕ್ಕಾಗಿ ಕೆಲವು ಭಕ್ತರು ಮತ್ತು ಪುರೋಹಿತರಿಂದ ಆಕ್ರೋಶ ಎದುರಿಸಬೇಕಾಯಿತು.

ಅದಾದ ನಂತರ ತಾನು ಪುರುಷನಿಂದ ಬದಲಾಗಿರುವ ಸ್ತ್ರೀ ಎಂದು ಅವರಿಗೆ ವಿವರಿಸಿದರು, ಇವರಿಗೆ ಮಕ್ಕಳನ್ನು ಹೆರಲು ಸಾಧ್ಯವಿಲ್ಲ, ಹೀಗಾಗಿ 'ದರ್ಶನ' ಪಡೆಯಬಹುದಾಗಿದೆ.

ಒಂದು ರೀತಿಯಲ್ಲಿ, ಈ ದೇವಾಲಯದ ಭೇಟಿಯು ತೃತೀಯ ಲಿಂಗಿ ಮಹಿಳೆಯರ ಹಕ್ಕುಗಳ ಬಗ್ಗೆ ಜನರಿಗೆ ತಿಳಿಸಲು ನನಗೆ ಅವಕಾಶ ಮಾಡಿಕೊಟ್ಟಿತು ಎಂದು ಅವರು ಹೇಳಿದ್ದಾರೆ.

ಕೇರಳ ಪೊಲೀಸರು ತನಗೆ ರಕ್ಷಣೆ ನೀಡಿ ದರ್ಶನ ಪಡೆಯಲು ಸಹಾಯ ಮಾಡಿದ್ದಕ್ಕಾಗಿ ಹಾಗೂ ಯಾವುದೇ ಅಡೆತಡೆಗಳನ್ನು ಸೃಷ್ಟಿಸದ ದೇವಸ್ವಂ ಮಂಡಳಿಯನ್ನು ಶ್ಲಾಘಿಸಿದರು.

ನನ್ನ ಪೋಷಕರು ನನ್ನ ಸುರಕ್ಷತೆಯ ಬಗ್ಗೆ ಚಿಂತಿತರಾಗಿದ್ದರು. ನಾನು ಜನವರಿ 4 ರಂದು ಬೆಳಿಗ್ಗೆ ನನ್ನ ಪ್ರಯಾಣ ಪ್ರಾರಂಭಿಸಿದೆ ಮತ್ತು ಜನವರಿ 5 ರಂದು ಸಂಜೆ ದರ್ಶನ ಮಾಡಿದೆ. ನಾನು ಸುರಕ್ಷಿತವಾಗಿದ್ದು ಮನೆಗೆ ಮರಳುತ್ತಿದ್ದೇನೆ ಎಂದು ನನ್ನ ಪೋಷಕರಿಗೆ ಕರೆ ಮಾಡಿದೆ.

ಐವರು ನನ್ನ ಜೊತೆಗಿದ್ದರು, ಆದರೆ ಅವರು ತಮ್ಮನ್ನು ತೃತೀಯಲಿಂಗಿ ಮಹಿಳೆ ಎಂದು ಘೋಷಿಸಲು ಹಾಗೂ ತಮ್ಮ ಡ್ರೆಸ್ ಬದಲಾಯಿಸಲು ಹೆದರುತ್ತಿದ್ದರು. ಆದರೆ ನಾನು ಸೀರೆಯಲ್ಲಿ ಮತ್ತು ಟ್ರಾನ್ಸ್ಜೆಂಡರ್ ಮಹಿಳೆಯಾಗಿ ಪವಿತ್ರ ಪ್ರವಾಸವನ್ನು ಪೂರ್ಣಗೊಳಿಸಿದೆ. ನಾನು ಅದರ ಬಗ್ಗೆ ಹೆಮ್ಮೆಪಡುತ್ತೇನೆ ಎಂದಿದ್ದಾರೆ.

## ಸಿಇಟಿ ಪರೀಕ್ಷಾ ದಿನಾಂಕದಲ್ಲಿ ಬದಲಾವಣೆ: ಏಪ್ರಿಲ್ 18–19ಕ್ಕೆ ಎಕ್ಸಾಂ ಫಿಕ್ಸ್

ಬೆಂಗಳೂರು: ಸಾಮಾನ್ಯ ಪ್ರವೇಶ ಪರೀಕ್ಷೆಯ (ಸಿಇಟಿ) ದಿನಾಂಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಎರಡು ದಿನಗಳ ಮಟ್ಟಿಗೆ ಹಿಂದೂಡಿದ್ದು, ಏಪ್ರಿಲ್ 18 ಮತ್ತು 19ರಂದು ಪರೀಕ್ಷೆಗಳು ನಡೆಯಲಿವೆ. ಈ ಮೊದಲು ಏಪ್ರಿಲ್ 20 ಮತ್ತು 21ರಂದು ಪರೀಕ್ಷೆ ನಿಗದಿಯಾಗಿತ್ತು.

'ಏಪ್ರಿಲ್ 21ರಂದು ಎನ್‌ಡಿಎ ಪರೀಕ್ಷೆ ನಡೆಯುತ್ತಿರುವುದರಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಕನ್ನಡ ಪರೀಕ್ಷೆ ಏಪ್ರಿಲ್ 20ರಂದು ನಡೆಯಲಿದೆ' ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್. ರಮ್ಯಾ ತಿಳಿಸಿದ್ದಾರೆ.

ವೃತ್ತಿಪರ ಕೋರ್ಸುಗಳಿಗೆ ಸೇರಲು ಬಯಸುವ ಅಭ್ಯರ್ಥಿಗಳು ಸಿಇಟಿ ಪರೀಕ್ಷೆಗೆ ಬುಧವಾರದಿಂದ (ಜ.10) ಫೆ. 10ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.



ವೈದ್ಯಕೀಯ, ದಂತ ವೈದ್ಯಕೀಯ, ಆಯುಷ್, ಬಿಪಿಟಿ, ಬಿಪಿಒ, ಬಿಎಸ್ಸಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳಿಗೆ ಸೇರಲು ಬಯಸುವ ಅಭ್ಯರ್ಥಿಗಳೂ ಈಗಲೇ ಅರ್ಜಿ ಸಲ್ಲಿಸಿ ನೋಂದಾಯಿಸಿಕೊಳ್ಳಬೇಕೆಂದು ಸೂಚಿಸಲಾಗಿದೆ.

ನೀಟ್ ಫಲಿತಾಂಶ ಪ್ರಕಟವಾದ ನಂತರ ಕೆಇಎಯಲ್ಲಿ ನೋಂದಾಯಿಸಿರುವ ಅಭ್ಯರ್ಥಿಗಳಿಗೆ ನೀಟ್ ಅಂಕ ಮತ್ತು ರೋಲ್ ನಂಬರ್ ದಾಖಲಿಸಲು ಇಂಟರ್‌ಫೇಸ್ ನೀಡಲಾಗುವುದು. ಸಿಇಟಿ ಪ್ರಕ್ರಿಯೆಯಲ್ಲಿ ಸುಧಾರಣೆ ತರುವ ಭಾಗವಾಗಿ ಈ ಬಾರಿ ಅರ್ಜಿಯನ್ನು 'ಅರ್ಜಿ ಹಾಗೂ ಪರಿಶೀಲನೆ' ನಮೂನೆಯಲ್ಲಿ ಹೊರತರಲಾಗಿದೆ. ಇದರಿಂದಾಗಿ, ಅಭ್ಯರ್ಥಿಗಳ ದಾಖಲಾತಿಗಳನ್ನು ಭೌತಿಕವಾಗಿ ಪರಿಶೀಲಿಸುವ ಸಮಯ ಉಳಿತಾಯವಾಗಲಿದೆ.

ಹೊಸ ಮಾದರಿಯಲ್ಲಿ ಅಭ್ಯರ್ಥಿಗಳ ವಿವರಗಳನ್ನು, ಅಂದರೆ ಶಾಲೆಗಳ ವ್ಯಾಸಂಗ, ಕನ್ನಡ ಮಾಧ್ಯಮ, ಜಾತಿ, ಆದಾಯ ಮತ್ತಿತರ ವಿವರಗಳನ್ನು ಎಸ್‌ಎಟಿಎಸ್ ಹಾಗೂ ಕಂದಾಯ ಇಲಾಖೆಯ ವೆಬ್ ಸೇವೆಯ ಮುಖಾಂತರ ಆನ್‌ಲೈನ್ ಮೂಲಕವೇ ಪರಿಶೀಲಿಸಲಾಗುವುದು. ಅಭ್ಯರ್ಥಿಗಳು ಪ್ರತ್ಯೇಕವಾಗಿ ದಾಖಲೆಗಳ ಪರಿಶೀಲನೆಗೆ ಭೌತಿಕವಾಗಿ ಹಾಜರಾಗುವ ಅವಶ್ಯಕತೆ ಇಲ್ಲ.

ಪ್ರತಿ ವರ್ಷವೂ ಸುಮಾರು ಒಂದೂವರೆ ತಿಂಗಳು ನಡೆಯುತ್ತಿದ್ದ ಪರಿಶೀಲನೆ ಕಾರ್ಯ ಈಗ ಅರ್ಜಿ ಸಲ್ಲಿಸುವ ಸಮಯದಲ್ಲಿಯೇ ನಡೆಯಲಿವೆ. ಹೀಗಾಗಿ, ಅಭ್ಯರ್ಥಿಗಳು ಎಲ್ಲ ವಿವರಗಳನ್ನು ಎಚ್ಚರಿಕೆಯಿಂದ ಭರ್ತಿ ಮಾಡಲು ಮತ್ತು ಅಗತ್ಯವಿರುವ ಎಲ್ಲ ದಾಖಲೆಗಳನ್ನು ಅಪ್ ಲೋಡ್ ಮಾಡಬೇಕು ಎಂದೂ ಸೂಚಿಸಲಾಗಿದೆ.

### ದಳಪತಿಗಳಿಗೆ ಸೆಡ್ಡು ಹೊಡೆದು ಪದಾಧಿಕಾರಿಗಳ ನೇಮಕ ಮಾಡಿದ ಸಿಎಂ ಇಬ್ರಾಹಿಂ



ಬೆಂಗಳೂರು: ದಳಪತಿಗಳಿಗೆ ಸೆಡ್ಡು ಹೊಡೆದು, ಲೋಕಸಭಾ ಚುನಾವಣೆಗೆ ಜೆಡಿಎಸ್ ಪಕ್ಷದಿಂದ ಅಧ್ಯಕ್ಷರ ಹಾಗೂ ಪದಾಧಿಕಾರಿಗಳ ನೇಮಕವನ್ನು ಸಿಎಂ ಇಬ್ರಾಹಿಂಮಾಡಿದ್ದಾರೆ. ಸಿಎಂ ಇಬ್ರಾಹಿಂ ಅವರನ್ನು ಜೆಡಿಎಸ್‌ನಿಂದ ಉಚ್ಚಾಟನೆ ಮಾಡಿದ್ದರೂ ನಮ್ಮದೇ ಒರಿಜಿನಲ್ ಪಕ್ಷ ಎಂದು ಹೇಳಿ ಸಕ್ರಿಯವಾಗಿದ್ದಾರೆ. ಲೋಕಸಭಾ ಚುನಾವಣೆ ಸಮೀಪ ಬರುತ್ತಿದ್ದು, ಈ ಹಿನ್ನೆಲೆಯಲ್ಲಿ ಜೆಡಿಎಸ್‌ನ ಪದಾಧಿಕಾರಿಗಳ ಹಾಗೂ ಲೋಕಸಭಾ ಚುನಾವಣೆಗೆ ಅಧ್ಯಕ್ಷರ ನೇಮಕ ಮಾಡಿದ್ದಾರೆ. ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಪಕ್ಷದ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಮಹಿಳಾ ವಿಭಾಗದ ಅಧ್ಯಕ್ಷರನ್ನಾಗಿ ಲಕ್ಷ್ಮಿ ಬಿ ಅವರನ್ನು ನೇಮಕ ಮಾಡಲಾಗಿದೆ ಎಂದು ಸಿಎಂ ಇಬ್ರಾಹಿಂ ತಿಳಿಸಿದ್ದಾರೆ.

ಈಗಾಗಲೇ ಬಿಜೆಪಿಯೊಂದಿಗೆ ಜೆಡಿಎಸ್ ಮೈತ್ರಿ ಮಾಡಿಕೊಂಡಿರುವ ಬೆನ್ನಲ್ಲೇ ರಾಜ್ಯಾಧ್ಯಕ್ಷರಾಗಿದ್ದ ಸಿಎಂ ಇಬ್ರಾಹಿಂ ವಿರೋಧವನ್ನು ವ್ಯಕ್ತಪಡಿಸಿದ್ದರು. ಅದಾದ ಬಳಿಕ ಹೆಚ್.ಡಿ ದೇವೇಗೌಡರು ಸಿಎಂ ಇಬ್ರಾಹಿಂ ಅವರನ್ನು ಜೆಡಿಎಸ್‌ನಿಂದ ಉಚ್ಚಟನೆ ಮಾಡಿದ್ದರು. ಅದಾದ ಬಳಿಕ ರಾಷ್ಟ್ರ ಮಟ್ಟದಲ್ಲಿ ಸಭೆ ನಡೆಸಿ ಸಿಎಂ ಇಬ್ರಾಹಿಂ ಅವರೂ ನಮ್ಮದು ಮೂಲ ಜೆಡಿಎಸ್ ಎಂದು ಹೇಳಿ ಜೆಡಿಎಸ್‌ನ ರಾಷ್ಟ್ರಾಧ್ಯಕ್ಷ ಹೆಚ್‌ಡಿ ದೇವೇಗೌಡರಿಗೆ ನೋಟಿಸ್ ನೀಡಿದ್ದರು. ಇದೀಗ ಪದಾಧಿಕಾರಿಗಳನ್ನು ನೇಮಕ ಮಾಡಿ ವರಿಷ್ಠರಿಗೆ ಶಾಕ್ ನೀಡಲು ಮುಂದಾಗಿದ್ದಾರೆ.

**ಕರ್ನಾಟಕ ಸರ್ಕಾರ**
**ಪಟ್ಟಣ ಪಂಚಾಯತ ಕಾರ್ಯಲಯ, ಚಿಂಚಲಿ–591217**
**ಜಿಲ್ಲೆ : ಬೆಳಗಾವಿ, ರಾಜ್ಯ: ಕರ್ನಾಟಕ**
Website: www.chinchallitown.gov.in E-Mail Itstaff_ulb_chinchallitown@yahoo.co.in

ಕ್ರ.ಸಂ.ಪ.ಪಂ.ಚಿ./ತಾಂತ್ರಿಕ/ಸಿಆರ್–2023–24/ ದಿನಾಂಕ:08–01–2024

**ಅಲ್ಪಾವಧಿ ಟೆಂಡರ ಪ್ರಕಟಣೆ (ಕೆ.ಪಿ.ಪಿ. ಪೋರ್ಟಲ್ ಮೂಲಕ)**

ಚಿಂಚಲಿ ಪಟ್ಟಣ ಪಂಚಾಯತಗೆ ಸನ್ 2023–24 ನೇ ಸಾಲಿನ ಸ್ವಚ್ಛ ಭಾರತ ಮಿಷನ್ (ನಗರ) 2.0 ಅನುದಾನದಲ್ಲಿ ಕಾಮಗಾರಿಗಳ ಕುರಿತು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಇಂಡೆಂಟ್ ನಂ.9082Call-2 ಮುಖಾಂತರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಆಧ್ಯಾದೇಶ 1999 ಮತ್ತು ನಿಯಮಗಳು 2000 ದಂತೆ ಕರ್ನಾಟಕ ಲೋಕೋಪಯೋಗಿ ಮತ್ತು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೊಂದಾಯಿತ ಅರ್ಹ ಸಿವಿಲ್ ಗುತ್ತಿಗೆದಾರರುಗಳಿಂದ ಐಟಂವಾರು ಟೆಂಡರಗಳನ್ನು ಅಹ್ವಾನಿಸಲಾಗಿದ್ದು, ಗುತ್ತಿಗೆದಾರರು ತಮ್ಮ ದರ ನಮೂದಿಸಿದ ಟೆಂಡರಗಳನ್ನು ಕೆ.ಪಿ.ಪಿ. ಪೋರ್ಟಲ್ ಈ ಕೆಳಗೆ ನಿಗದಿಪಡಿಸಿದ ದಿನಾಂಕಗಳಂದು ಸಂಜೆ:4.30 ಗಂಟೆಯೊಳಗೆ ಆನ್‌ಲೈನ್ ಸಲ್ಲಿಸತಕ್ಕದ್ದು ಕಾಮಗಾರಿಗಳ ವಿವರ ವೆಬ್‌ಸೈಟ www. chinchalitown.mrc.gov.in ಮತ್ತು https://kppp.karnataka. gov.in/ ಗಳಲ್ಲಿ ವಿಕ್ಷಿಸಬಹುದಾಗಿದ್ದು, ಟೆಂಡರ ಸಲ್ಲಿಸಲು ಕೊನೆಯ ದಿನಾಂಕ:16–01–2024 ಹಾಗೂ ಟೆಂಡರ ತೆರೆಯುವ ದಿನಾಂಕ:17–01–2024 ನಿಗದಿಪಡಿಸಲಾಗಿದೆ.

**ಸಹಿ/–ಮುಖ್ಯಾಧಿಕಾರಿಗಳು**
**ಪಟ್ಟಣ ಪಂಚಾಯತ ಚಿಂಚಲಿ**

DIPR/BGM/RO-NO-911/KSMCA/2023-24

## ಮಾನಸಿಕ ಅಸ್ವಸ್ಥ ಬಾಲಕಿ ಮೇಲೆ ವೃದ್ಧನಿಂದ ಲೈಂಗಿಕ ಕಿರುಕಳ




ರಾಮನಗರ: 65 ವರ್ಷದ ವೃದ್ಧನಿಂದ 12 ವರ್ಷದ ಮಾನಸಿಕ ಅಸ್ವಸ್ಥ ಬಾಲಕಿ ಮೇಲೆ ಲೈಂಗಿಕ ಕಿರುಕಳ ಮಾಡಿರುವಂತಹ ಘಟನೆ ಜಿಲ್ಲೆಯ ಮಾಗಡಿ ತಾಲೂಕಿನ ಕುದೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಚಾಕಲೇಟ್ ಕೊಡಿಸುವುದಾಗಿ ಹೇಳಿ ಬಟ್ಟೆ ಬಿಚ್ಚಿಸಿದ ಆರೋಪ ಮಾಡಲಾಗಿದೆ. ಮಾತನಾಡಲು ಬಾರದ ಕಾರಣ ಯಾರಿಗೆ ಹೇಳುತ್ತಾಳೆ ಎಂದು ಬಾಲಕಿಯನ್ನು ಮನೆಯ ಹಿತ್ತಲಿಗೆ ಕರೆದುಕೊಂಡು ಹೋಗಿ ಕೃತ್ಯವೆಸಗಲಾಗಿದೆ.

ತಾಯಿ ಮನೆಗೆ ವಾಪಾಸ್ ಆದಾಗ ಬಾಲಕಿ ಅಳುತ್ತಿದ್ದಳು. ಯಾಕೆ ಅಳುತ್ತಿದ್ದೀಯಾ ಅಂತ ಕೇಳಿದಾಗ, ಅಳುತ್ತಲೇ ತನ್ನ ಗುಪ್ತಾಂಗ ತೋರಿಸಿದ್ದಾಳೆ. ಯಾರು ಮಾಡಿದ್ದು ಅಂತ ಕೇಳಿದಾಗ ಸನ್ನೆ ಮಾಡಿ ಅಜ್ಜನ ಬಗ್ಗೆ ಬಾಲಕಿ ಹೇಳಿದ್ದಾಳೆ. ಕೂಡಲೇ ಅಜ್ಜನನ್ನು ಹಿಡಿದ ಸ್ಥಳೀಯರು ಧರ್ಮದೇಟು ನೀಡಿದ್ದಾರೆ. ಬಳಿಕ ಬಾಲಕಿ ಮೇಲೆ ಲೈಂಗಿಕ ಕಿರುಕಳ ಮಾಡಿರುವುದಾಗಿ ಅಜ್ಜ ಒಪ್ಪಿಕೊಂಡಿದ್ದಾರೆ. ಸರ್ಕಾರಿ ಆಸ್ಪತ್ರೆ ಯಲ್ಲಿ ಬಾಲಕಿಗೆ ಚಿಕಿತ್ಸೆ ನೀಡಿದ್ದು, ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲು ಮಾಡಲಾಗಿದೆ.

## ನಾಯಿ ಮಾಂಸ ನಿಷೇಧ: ಮಸೂದೆಯಲ್ಲಿ ಅಂಗೀಕಾರ

ಸಿಯೋಲ್: ನಾಯಿ ಮಾಂಸ ಸೇವನೆ ನಿಷೇಧಿಸುವ ಮಸೂದೆಗೆ ದಕ್ಷಿಣ ಕೊರಿಯಾದ ಸಂಸತ್‌ನಲ್ಲಿ ಅಂಗೀಕಾರ ದೊರೆತಿದೆ. ಮಸೂದೆಯ ಪರ 208, ವಿರುದ್ಧ ಶೂನ್ಯ ಮತಗಳು ಬಿದ್ದಿವೆ. ಅಧ್ಯಕ್ಷರ ಅಂಕಿತ ಬೀಳುತ್ತಿದ್ದಂತೆ ಈ ಮಸೂದೆಯು ಕಾನೂನಾಗಿ ಬದಲಾಗಲಿದ್ದು, 2027ರಿಂದ ಜಾರಿಯಾಗಲಿದೆ.

ಅದರಂತೆ, ಆಹಾರಕ್ಕಾಗಿ ನಾಯಿಗಳ ಸಾಕಣೆ, ವಧೆ, ಮಾರಾಟಕ್ಕೆ ನಿಷೇಧವಿರಲಿದ್ದು, ಉಲ್ಲಂಘಿ ಸಿದವರಿಗೆ 2-3 ವರ್ಷ ಜೈಲು ಶಿಕ್ಷೆ ವಿಧಿಸಲಾಗುತ್ತದೆ.

## ಮಕ್ಕಳ ರಕ್ಷಣೆಗೆ ನಿರಂತರ ತಪಾಸಣೆ ಮಾಡಿ;ಬಾಲ್ಯವಿವಾಹ ತಡೆಯಲು ಸಮಿತಿಗಳು ಕ್ರಿಯಾಶೀಲವಾಗಲಿ: ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ



ಧಾರವಾಡ: ಬಾಲ ಕಾರ್ಮಿಕ, ಬಾಲ್ಯವಿವಾಹ, ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆದು, ಮಕ್ಕಳನ್ನು ರಕ್ಷಿಸಲು ತಹಸಿಲ್ದಾರ ನೇತೃತ್ವದ ತಾಲೂಕು ಮಟ್ಟದ ಅಧಿಕಾರಿಗಳ ತಂಡ ನಿರಂತರ ತಪಾಸಣೆ ಕೈಗೊಳ್ಳಬೇಕು ಎಂದು ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಧಾರವಾಡ ತಾಲೂಕು ಪಂಚಾಯತ ಸಭಾಭವನದಲ್ಲಿ ಧಾರವಾಡ ತಾಲೂಕುಮಟ್ಟದ ವಿವಿಧ ಇಲಾಖೆ ಅಧಿಕಾರಿಗಳ ಸಭೆ ಜರುಗಿಸಿ, ಮಾತನಾಡಿದರು.

ಮಕ್ಕಳಿಗೆ ಸಂವಿಧಾನಾತ್ಮಕವಾಗಿ ಸೀಗುವ ಹಕ್ಕು ದೊರೆಯುವಂತೆ ಮಾಡುವುದು ಎಲ್ಲರ ಕರ್ತವ್ಯ. ಮಕ್ಕಳ ಪ್ರಯಾಣಕ್ಕೆ ಸುರಕ್ಷಿತ ಸಾರಿಗೆ, ಶಾಲೆ, ವಸತಿ ನಿಲಯಗಳಲ್ಲಿ ಉತ್ತಮ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು. ಈ ನಿಟ್ಟಿನಲ್ಲಿ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ಹೇಳಿದರು. ಪೋಕ್ಸೊ, ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ಸಮಾಜದಲ್ಲಿ ಹೆಚ್ಚು ಅರಿವು ಮೂಡಿಸಬೇಕು.

ಶಾಲಾ ಮಕ್ಕಳಲ್ಲಿ ಅವರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಬೇಕು. ದೌರ್ಜನ್ಯ ಪ್ರಕರಣಗಳ ಕುರಿತು ಮಾಹಿತಿ ದೊರೆತ ತಕ್ಷಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ಕ್ರಮಕೈಗೊಳ್ಳಬೇಕು ಎಂದು ಶೇಖರಗೌಡ ಅವರು ತಿಳಿಸಿದರು.

ತಮ್ಮ ಕರ್ತವ್ಯದ ನಿರ್ಲಕ್ಷ್ಯದಿಂದ ಮಕ್ಕಳಿಗೆ ಹಾನಿ ಆಗದಂತೆ ಜವಾಬ್ದರಿಯಿಂದ ಅಧಿಕಾರಿಗಳು ಕೆಲಸ ಮಾಡಬೇಕು. ವಿಶೇಷವಾಗಿ ಶಿಥಿಲವಾದ ಶಾಲಾ ಕಟ್ಟಡಗಳ, ವಸತಿಶಾಲೆ ಕಟ್ಟಡಗಳ ಬಗ್ಗೆ ಪರಿಶೀಲಿಸಬೇಕು. ದುರಸ್ತಿ ಇದ್ದರೆ ತಕ್ಷಣ ಮಾಡಿಸಬೇಕು ಎಂದು ಅವರು ಹೇಳಿದರು.

ಮದುವೆ ಸೀಜನ್ ಬಂದಿದೆ. ಬಾಲ್ಯವಿವಾಹಗಳ ಬಗ್ಗೆ ಎಚ್ಚರವಹಿಸಬೇಕು. ಸಾಮೂಹಿಕ ವಿವಾಹಗಳ ಅನುಮತಿಸುವಾಗ ನೋಂದಾಯಿತರ ದಾಖಲಾತಿಗಳ ಸಮಗ್ರ ಪರಿಶೀಲನೆ ಆಗಬೇಕು. ಪಾಲಕರಲ್ಲಿ ಬಾಲ್ಯವಿವಾಹ ನಿಗಘೀಧ ಕಾಯ್ದೆ ಕುರಿತು ಜಾಗೃತಿ ಮೂಡಿಸಬೇಕು. ಪ್ರತಿ ಗ್ರಾಮ ಪಂಚಾಯತದಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆ ತಪ್ಪದೇ ಆಯೋಜಿಸಬೇಕು ಎಂದು ಅವರು ತಿಳಿಸಿದರು.

ಧಾರವಾಡ ತಹಸಿಲ್ದಾರ ದೊಡ್ಡಪ್ಪ ಹೂಗಾರ, ತಾಲೂಕು ಪಂಚಾಯತ ಇಓ ಗಂಗಾಧರ ಕಂದಕೂರ ವೇದಿಕೆಯಲ್ಲಿದ್ದರು.

ಸಭೆಯಲ್ಲಿ ಉಪಸ್ಥಿತರಿದ್ದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೀತಾ ವಾಡಕರ, ತಾಲೂಕು ಆರೋಗ್ಯಾಧಿಕಾರಿ ಡಾ.ಕೆ.ಎನ್.ತನುಜಾ ಸೇರಿದಂತೆ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಹಿಂದುಳಿದ ವರ್ಗಗಳ, ಸಮಾಜ ಕಲ್ಯಾಣ, ಎನ್.ಡಬ್ಲ್ಯೂ.ಕೆ.ಎಸ್.ಆರ್ಟಿ.ಸಿ, ಅಕ್ಷರದಾಸೋಹ, ಶಾಲಾಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಲೋಕೊಪಯೋಗಿ ಇಲಾಖೆ, ಪೊಲೀಸ್ ಇಲಾಖೆಯ ಅಧಿಕಾರಿಗಳು ಭಾಗವಹಿಸಿ, ಮಕ್ಕಳ ರಕ್ಷಣೆ, ಸುರಕ್ಷತೆಗೆ ಕೈಗೊಂಡ ಕ್ರಮಗಳ ಕುರಿತು ಸಭೆಯಲ್ಲಿ ವಿವರಿಸಿದರು.

## ಜ.16 ರಂದು ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ

ಬೆಳಗಾವಿ: ಬೆಳಗಾವಿಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತ್ಯೋತ್ಸವ ಜನವರಿ 16, 2024 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುಮಾರ ಗಂಧರ್ವ ಕಲಾಮಂದಿರ ವೇದಿಕೆಯಲ್ಲಿ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವರಾದ ಸತೀಶ ಲ. ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮಿ ಆರ್. ಹೆಬ್ಬಾಳ್ಕರ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದದ್ದಾರೆ.

ಶಾಸಕರಾದ ಆಸೀಫ್ ಸೇಠ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಮ. ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಶ ಪ್ರತಿನಿಧಿ-2 ನವದೆಹಲಿ ಪ್ರಕಾಶ ಬಾ. ಹುಕ್ಕೇರಿ ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ಬೆಳಗಾವಿ ಜಿಲ್ಲಾ ಭೋವಿ ವಡ್ಡರ ಸಮಾಜ ಅಧ್ಯಕ್ಷರಾದ ಎಲ್. ಜಿ ಗಾಡಿವಡ್ಡರ ಕಾರ್ಯಕ್ರಮದಲ್ಲಿ ಇರಲಿದ್ದಾರೆ. ಅದೇ ರಿತೀಯಲ್ಲಿ ಡಾ. ಸುಬ್ಬರಾವ ಎಂಟೆತ್ತಿನವರ ಪ್ರಾಧ್ಯಾಪಕರು ಉಪನ್ಯಾಸ ನೀಡಲಿದ್ದಾರೆ ಹಾಗೂ ಶಶಿಕುಮಾರ ಸೂರ್ಯವಂಶಿ ವಚನ ಸಂಗೀತ ಕಾರ್ಯಕ್ರಮ ನಡೆಯಲಿದೆ.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ್ ಬಿ. ಶಟ್ಟೆಣ್ಣವರ, ಪೋಲೀಸ್ ಮಹಾನಿರೀಕ್ಷಕರಾದ ವಿಕಾಶ್ ಕುಮಾರದ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಪಾಟೀಲ, ಪೋಲೀಸ್ ಆಯುಕ್ತರಾದ ಎಸ್. ಎಸ್. ಸಿದ್ದರಾಮಪ್ಪ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಾದ ಭೀಮಾಶಂಕರ ಎಸ್. ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.19 ರಂದು ಮಹಾಯೋಗಿ ವೇಮನ ಜಯಂತಿ ಉತ್ಸವ

ಬೆಳಗಾವಿ: ಬೆಳಗಾವಿಯ ಜಿಲ್ಲಾಟಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಮಹಾಯೋಗಿ ವೇಮನ ಜಯಂತ್ಯೋತ್ಸವವನ್ನು ಜನವರಿ 19, 2024 ಸಂಜೆ 4 ಕ್ಕೆ ಜಿಲ್ಲಾಧಿಕಾರಿ ಆವರಣದಿಂದ ಕುಮಾರ ಗಂಧರ್ವ ಕಲಾಮಂದಿರದವರೆಗೆ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಸಂಜೆ 5 ಗಂಟೆಗೆ ಕುಮಾರ ಗಂಧರ್ವ ಕಲಾಮಂದಿರ ವೇದಿಕೆಯಲ್ಲಿ ಕಾರ್ಯಕ್ರಮ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವರಾದ ಸತೀಶ ಲ. ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮಿ ಆರ್. ಹೆಬ್ಬಾಳ್ಕರ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದದ್ದಾರೆ.

ಶಾಸಕರಾದ ಆಸೀಫ್ ಸೇಠ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಮ. ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಶ ಪ್ರತಿನಿಧಿ-2 ನವದೆಹಲಿ ಪ್ರಕಾಶ ಬಾ. ಹುಕ್ಕೇರಿ ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ಉತ್ತರ ಕನ್ನಡ ಸಂಸದರಾದ ಅನಂತಕುಮಾರ ಹೆಗಡೆ, ಚಿಕ್ಕೋಡಿ ಸಂಸದರಾದ ಅಣ್ಣಾಸಾಹೇಬ ಜೊಲ್ಲೆ, ರಾಜ್ಯಸಭೆ ಸಂಸದರಾದ ಈರಣ್ಣ ಕಡಾಡಿ, ಲೋಕಸಭೆ ಸಂಸದರಾದ ಮಂಗಲ ಸುರೇಶ ಅಂಗಡಿ ಗೌರವಾನ್ವಿತ ಅತಿಥಿಯಾಗಿದ್ದಾರೆ.

ಬೆಳಗಾವಿ ರೆಡ್ಡಿ ಸಂಘದ ಅಧ್ಯಕ್ಷರಾದ ರಾಮಣ್ಣ ವೆಂ. ಮುಳ್ಳೂರ ಕಾರ್ಯಕ್ರಮದಲ್ಲಿ ಇರಲಿದ್ದಾರೆ. ಅದೇ ರಿತೀಯಲ್ಲಿ ಸಿದ್ದಣ್ಣ ಲಂಗೋಟಿ ರಾಮದುರ್ಗ ಶರಣರು ಉಪನ್ಯಾಸ ನೀಡಲಿದ್ದಾರೆ ಹಾಗೂ ಡಾ. ಪ್ರತಾಪ ಕುಮಾರ ಹಾಗೂ ತಂಡದವರಿಂದ ವಚನ ಸಂಗೀತ ಕಾರ್ಯಕ್ರಮ ನಡೆಯಲಿದೆ.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ್ ಬಿ. ಶಟ್ಟೆಣ್ಣವರ, ಪೋಲೀಸ್ ಮಹಾನಿರೀಕ್ಷಕರಾದ ವಿಕಾಶ್ ಕುಮಾರದ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಪಾಟೀಲ, ಪೋಲೀಸ್ ಆಯುಕ್ತರಾದ ಎಸ್. ಎಸ್. ಸಿದ್ದರಾಮಪ್ಪ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಾದ ಭೀಮಾಶಂಕರ ಎಸ್. ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೂ ಕಂದಾಯ ಬಾಕಿ: ಬಹಿರಂಗ ಹರಾಜು

ಬೆಳಗಾವಿ: ಹೆಚ್ಚುವರಿ ಹಿರಿಯ ನ್ಯಾಯಾಧೀಶರು ಮತ್ತು ಜೆಎಮ್ಎಫ್‌ಸಿ ನ್ಯಾಯಾಲಂಯ ಹಾನಗಲ್ ಇವರಲ್ಲಿನ ಕ್ರಿ.ಮಿ.ನಂ.163/2011 ರಲ್ಲಿ, ಬೆಳಗಾವಿಯ ಮುತ್ನಾಳ ಅಡಿವೆಪ್ಪಾ ಯಲ್ಲಪ್ಪಾ ಲಟ್ಟೆ ಇವರ ಪತ್ನಿ ಆಶಾ ಅಡಿವೆಪ್ಪ ಲಟ್ಟೆ ಇವರಿಂದ ರೂ. 20,000/- ಗಳ ಮೊತ್ತವು ಬಾಕಿ ಇರುವುದರಿಂದ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ಪರಿಗಣಿಸಲಾಗಿದೆ ಹಾಗೂ ಸದರೀ ಮೊತ್ತವನ್ನು ವಸೂಲಿ ಮಾಡಲು ನ್ಯಾಯಾಲಯ ಆದೇಶ ನೀಡಿರುತ್ತದೆ.

ಮೊತ್ತದ ವಸೂಲಾತಿಗಾಗಿ ಮಾಲ್ಕೀಯ ಮುತ್ನಾಳ ಗ್ರಾಮದ ಆಸ್ತಿ ನಂ.250 ಎ ಆಸ್ತಿಯನ್ನು ಜ. 25, 2024 ರಂದು ಬೆಳಿಗ್ಗೆ 11 ಗಂಟೆಗೆ ಬೆಳಗಾವಿಯ ತಹಸೀಲ್ದಾರರಿಂದ ಅಧಿಕಾರ ಪಡೆದ ಅಧಿಕಾರಿಯ ಸಮ್ಮುಖದಲ್ಲಿ ಬಹಿರಂಗ ಹರಾಜು ಮಾಡುವುದರ ಮೂಲಕ ವಸೂಲಾತಿ ಕೈಗೊಳ್ಳಲಾಗುವುದು.

ಆಸಕ್ತಿಯುಳ್ಳ ವ್ಯಕ್ತಿಗಳು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದು ಹಾಗೂ ಹೆಚ್ಚಿನ ವಿವರಗಳಿಗೆ ಬೆಳಗಾವಿಯ ತಹಸೀಲ್ದಾರ ಇವರ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಬೆಳಗಾವಿಯ ತಹಸೀಲ್ದಾರ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿ ಕಚೇರಿ ಎದುರು ಕೊಬ್ಬರಿ ಬೆಳೆಗಾರರ ಅಹೋರಾತ್ರಿ ಧರಣಿ

ತುಮಕೂರು: ಜಿಲ್ಲಾಧಿಕಾರಿ ಕಚೇರಿ ಮುಂದೆ ಕೊಬ್ಬರಿ ಬೆಳೆಗಾರರ ಪರವಾಗಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಅಹೋರಾತ್ರಿ ಧರಣಿ ನಡೆಸುತ್ತಿದ್ದು, ಇಂದು ಪ್ರತಿಭಟನಾ ಸ್ಥಳಕ್ಕೆ ತಿಪಟೂರು ಜೆಡಿಎಸ್ ಮುಖಂಡ ಕೆ.ಟಿ ಶಾಂತಕುಮಾರ್ ಭೇಟಿ ನೀಡಿ ಬೆಂಬಲ ಸೂಚಿಸಿದರು.



ಈ ವೇಳೆ ಮಾತನಾಡಿದ ಅವರು, ಡಿ.ಕೆ ಶಿವಕುಮಾರ್ ಅವರು ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಕೊಬ್ಬರಿಗೆ 15 ಸಾವಿರ ನೀಡುತ್ತೇವೆ ಎಂದು ವಾಗ್ದಾನ ನೀಡಿದ್ದರು. ಅದು ಹುಸಿಯಾಗಿದೆ, ಕೇಂದ್ರ ಸರ್ಕಾರ ಈ ತಿಂಗಳ 20 ರಿಂದ ನಫೆಡ್ ತೆರೆಯುವ ಮೂಲಕ ಕೊಬ್ಬರಿಯನ್ನು 12000ದಂತೆ ಪಡೆಯುತ್ತದೆ, ರಾಜ್ಯ ಸರ್ಕಾರ ಕೇವಲ 1500 ಬೆಂಬಲ ಬೆಲೆ ಘೋಷಿಸಿದ್ದು, ಈಗ ಇರುವ 13500ರ ಜೊತೆಗೆ ರಾಜ್ಯ ಸರ್ಕಾರ 1500 ಹೆಚ್ಚುವರಿಯಾಗಿ ನೀಡಿ ಕ್ವಿಂಟಾಲ್ ಕೊಬ್ಬರಿಗೆ 15 ಸಾವಿರ ನೀಡಬೇಕು, ನಫೆಡ್ ಕನಿಷ್ಠ 1 ವರ್ಷ ತೆರೆದು ರೈತರ ಕಷ್ಟಕ್ಕೆ ಸ್ಪಂದಿಸಬೇಕು. ಈ ನಿಟ್ಟಿನಲ್ಲಿ ಪ್ರಧಾನ ಮಂತ್ರಿಗಳು ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಈಗಾಗಲೇ ಜೆಡಿಎಸ್ ವರಿಷ್ಠ ಹೆಚ್.ಡಿ ದೇವೇಗೌಡ ಮತ್ತು ಹೆಚ್.ಡಿ ಕುಮಾರಸ್ವಾಮಿ ಅವರು ಪ್ರಧಾನ ಮಂತ್ರಿಗಳನ್ನು ಭೇಟಿ ಮಾಡಿದ ಪರಿಣಾಮ ಕೇಂದ್ರ ಸಚಿವ ಸಂಪುಟದಲ್ಲಿ ಚರ್ಚಿಸಿ ನಫೆಡ್ ತೆರೆಯುತ್ತಿರುವುದು ಸ್ವಾಗತಾರ್ಹ. ದೊಡ್ಡ ಉಂಡೆ ಕೊಬ್ಬರಿಯನ್ನು ಮಾತ್ರ ಖರೀದಿಸುತ್ತಿದ್ದು, ಚಿಕ್ಕ ಉಂಡೆ ಕೊಬ್ಬರಿಯನ್ನು ತಿರಸ್ಕರಿಸುತ್ತಿದ್ದಾರೆ. ಅದನ್ನು ಸಹ ಖರೀದಿಸಬೇಕು ಎಂದು ಆಗ್ರಹಿಸಿದರು.


ಈ ಹಿಂದೆ ಅರಸೀಕೆರೆಯಿಂದ ಬೆಂಗಳೂರುವರೆಗೆ ರೈತರೊಂದಿಗೆ ಪಾದಯಾತ್ರೆ ಮಾಡಿದ್ದೇನೆ. ರೈತರ ಭರವಸೆಗಳು ಹುಸಿಯಾಗಿವೆ, 66 ಸಾವಿರ ಮೆಟ್ರಿಕ್ ಟನ್ ಖರೀದಿ ಮಾಡುತ್ತೇವೆ ಎಂದು ಹೇಳಿದ್ದಾರೆ. ರೈತರ ಒಟ್ಟು 1.5 ಲಕ್ಷ ಮೆಟ್ರಿಕ್ ಟನ್ ಕೊಬ್ಬರಿ ಖರೀದಿಸಬೇಕು, ನೇರವಾಗಿ ರೈತರಿಂದಲೇ ಕೊಬ್ಬರಿ ಖರೀದಿಸಬೇಕು, ಈ ಹಿಂದೆ ಹಲವಾರು ಅಂಗಡಿ ವರ್ತಕರು ರೈತರ ಹೆಸರೇಳಿಕೊಂಡು ನಫೆಡ್ ಮೂಲಕ ವ್ಯವಹರಿಸಿ ಅವರು ಹಣಗಳಿಸಿದರು ಎಂದು ಆರೋಪಿಸಿದರು.

ಫ್ರೂಟ್ಸ್ ತಂತ್ರಾಂಶದಂತೆ ರೈತರ ಬೆರಳಚ್ಚು ಪಡೆದು ಕೊಬ್ಬರಿ ಬೆಳೆಗಾರರಿಂದ ನೇರವಾಗಿ ನಫೆಡ್ ಖರೀದಿಸಬೇಕು, ಮಧ್ಯವರ್ತಿಗಳನ್ನು ದೂರವಿಡಬೇಕು, ಶೀತಲಘಟಕಗಳನ್ನು ತೆರೆದು ಕೊಬ್ಬರಿಯನ್ನು ಸ್ಟಾಕ್ ಮಾಡಬೇಕು, ಒಂದು ವೇಳೆ ಕೊಬ್ಬರಿ ಹೆಚ್ಚಾದರೆ ಅದನ್ನು ಮಕ್ಕಳಿಗೆ ಬೆಲ್ಲ ಮತ್ತು ಕೊಬ್ಬರಿ ನೀಡಬಹುದು. ಇದರಿಂದ ಮಕ್ಕಳ ಆರೋಗ್ಯ ಸಹ ವೃದ್ಧಿಸುತ್ತದೆ, ಮಕ್ಕಳ ಬಿಸಿಯೂಟಕ್ಕೆ ಸಹ ಬಳಸಬಹುದು, ಒಂದು ವೇಳೆ ಸರ್ಕಾರ ರೈತರಿಗೆ ಸ್ಪಂದಿಸದಿದ್ದರೆ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ರಾಜ್ಯ ಸರ್ಕಾರ ರೈತರ ಸಹನೆಯನ್ನು ಪರೀಕ್ಷಿಸಬಾರದು, ಮೂರು ಫೇಸ್ ವಿದ್ಯುತ್ ನೀಡಿಲ್ಲ, ರಾಜ್ಯದಲ್ಲಿ ತೀವ್ರ ಬರಗಾಲವಿದ್ದು, ಬೆಳೆ ಇಲ್ಲ, ಜನ-ಜಾನುವಾರುಗಳಿಗೆ ನೀರಿಲ್ಲ, ಮೇವಿಲ್ಲ, ರಾಜ್ಯದ ರೈತರು ಸಂಕಷ್ಟದಲ್ಲಿದ್ದಾರೆ, ಆದ್ದರಿಂದ ರಾಜ್ಯ ಸರ್ಕಾರ ಕೊಬ್ಬರಿ ಬೆಳೆದ ರೈತರಿಗೆ ಬೆನ್ನುಲುಬಾಗಿ ನಿಲ್ಲಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಜೆಡಿಎಸ್ ಅಧ್ಯಕ್ಷ ಆರ್ಸಿ.ಆಂಜಿನಪ್ಪ, ಜಿಲ್ಲಾಧ್ಯಕ್ಷ ಧನಂಜಯಾರಾಧ್ಯ, ಲೋಕೇಶ್, ಮಲ್ಲಿಕಾರ್ಜುನಯ್ಯ, ದೇವರಾಜು, ಸಿದ್ದರಾಜು, ಸಂಕರಲಿಂಗಪ್ಪ, ಸಣ್ಣರಾಮಯ್ಯ, ತೋಂಟಾರಾಧ್ಯ, ಲೋಕೇಶ್, ಸಿದ್ಧರಾಮಣ್ಣ, ಉಮೇಶ್, ರಾಜಣ್ಣ, ಚಂದ್ರೇಗೌಡ, ಜಿಲ್ಲಾ ಜೆಡಿಎಸ್ ಸೇವಾದಳದ ಅಧ್ಯಕ್ಷ ಕೆಂಪರಾಜು ಮತ್ತಿತರರು ಉಪಸ್ಥಿತರಿದ್ದರು.

## ಸರ್ಕಾರಿ ಶಾಲೆ ಮಕ್ಕಳು ವಿಮಾನದಲ್ಲಿ ಪ್ರವಾಸ; ಹೆಡ್ ಮಾಸ್ಟರ್ ನಿರ್ಧಾರಕ್ಕೆ ಸಂತಸ




ಕಲಬುರಗಿ: ಮಕ್ಕಳನ್ನು ಪ್ರವಾಸಕ್ಕೆ ಬಸ್ಸು ಅಥವಾ ರೈಲಿನಲ್ಲಿ ಕರೆದುಕೊಂಡು ಹೋಗುವುದು ಸಾಮಾನ್ಯ. ಆದರೆ ಈ ಮುಖ್ಯೋಪಾಧ್ಯಾಯರು ಮಕ್ಕಳನ್ನು ಪ್ರವಾಸಕ್ಕೆ ವಿಮಾನದಲ್ಲಿ ಕರೆದುಕೊಂಡು ಹೋಗಿದ್ದಾರೆ.

ಮಹಾರಾಷ್ಟ್ರದ ಅಕ್ಕಲಕೋಟೆ ತಾಲೂಕಿನ ಮೈಂದರ್ಗಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳನ್ನು ವಿಮಾನದಲ್ಲಿ ದೆಹಲಿಗೆ ಪ್ರವಾಸಕ್ಕೆಂದು ಕರೆದುಕೊಂಡು ಹೋಗಿದ್ದಾರೆ.

ಮುಖ್ಯೋಪಾಧ್ಯಾಯ ಮಹಾಂತೇಶ್ವರ ಕಟ್ಟಿಮನಿ ಅವರು ವಿದ್ಯಾರ್ಥಿಗಳನ್ನು ಕರೆದುಕೊಂಡು ಕಲಬುರಗಿಯಿಂದ ಮುಂಬೈಗೆ ರೈಲಿನಲ್ಲಿ ಹೋಗಿದ್ದಾರೆ. ಮುಂಬೈನಿಂದ ದೆಹಲಿಗೆ ವಿಮಾನದಲ್ಲಿ ಹೋಗಿದ್ದಾರೆ. ಮುಖ್ಯೋಪಾಧ್ಯಾಯ ಮಹಾಂತೇಶ್ವರ ಕಟ್ಟಿಮನಿ ಮಕ್ಕಳಿಂದ ಅಲ್ಪ ಹಣ ಸಂಗ್ರಹಿಸಿ, ಉಳಿದ ಹಣವನ್ನು ತಮ್ಮ ಕೈಯಿಂದ ಹಾಕಿದ್ದಾರೆ. ದೆಹಲಿಯಲ್ಲಿ ಸಂಸತ್ ಭವನ, ಕೆಂಪುಕೋಟೆ, ರಾಷ್ಟ್ರಪತಿ ಭವನ, ಇಂಡಿಯಾ ಗೇಟ್ ನೋಡಿ ಶಾಲಾ ಮಕ್ಕಳು ಸಂಭ್ರಮಿಸಿದ್ದಾರೆ. ಇನ್ನು ವಿಮಾನ ಪ್ರಯಾಣದಿಂದ ಶಾಲಾ ಮಕ್ಕಳಿಗೆ ಸಂತಸವಾಗಿದೆ.

## ಸಂಗೀತ ನಿರ್ದೇಶಕ ಗುರುಕಿರಣ್ ಮನೆಯಲ್ಲಿ 2.50 ಲಕ್ಷ ರೂ. ಕಳ್ಳತನ



ಬೆಂಗಳೂರು: ಖ್ಯಾತ ಸಂಗೀತ ನಿರ್ದೇಶಕ ಗುರುಕಿರಣ್ ಅವರ ಬೆಂಗಳೂರು ನಿವಾಸದಲ್ಲಿ ಕಳ್ಳತನವಾಗಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಕಳೆದ ಡಿ. 31ರಂದು ಮಧ್ಯಾಹ್ನ ತಮ್ಮ ರೂಂನ ಬೀರುವಿನಲ್ಲಿಟ್ಟಿದ್ದ 2.50 ಲಕ್ಷ ರೂ.ಗಳನ್ನು ಗುರುಕಿರಣ್ ಅತ್ತೆ ಕಸ್ತೂರಿ ಶೆಟ್ಟಿ ಇಟ್ಟಿದ್ದರು. ಆದ್ರೆ ಜನವರಿ 5ರಂದು ಹಣ ಕಳ್ಳತನವಾಗಿದೆ. ಎರಡು ದಿನಗಳ ಕಾಲ ಕುಟುಂಬಸ್ಥರು ಮನೆಯೆಲ್ಲ ಹುಡುಕಾಡಿದ್ದಾರೆ.

ಎಷ್ಟು ಹುಡುಕಾಡಿದರೂ ಹಣ ಸಿಗದೇ ಇದ್ದಾಗ ಜನವರಿ 7 ರಂದು ಚಂದ್ರಲೇಔಟ್ ಪೊಲೀಸ್ ಠಾಣೆಗೆ ಗುರುಕಿರಣ್ ಅತ್ತೆ ದೂರು ನೀಡಿದ್ದಾರೆ. ಈ ಸಂಬಂಧ ಎಫ್‌ಐಆರ್ ಸಹ ದಾಖಲಾಗಿದೆ. ಮನೆ ಕೆಲಸದವರ ಮೇಲೆ ಕಸ್ತೂರಿ ಶೆಟ್ಟಿ ಅವರು ಅನುಮಾನ ವ್ಯಕ್ತಪಡಿಸಿದ್ದಾರೆ. ಸದ್ಯ ಮನೆ ಕೆಲಸದಾಕೆ ರತ್ನಮ್ಮ ಅವರನ್ನು ವಿಚಾರಣೆ ನಡೆಸಿರುವ ಚಂದ್ರಲೇಔಟ್ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ತುಮಕೂರು: ಜ.13ರಂದು ನಿಷೇಧಾಜ್ಞೆ: ಜಿಲ್ಲಾಧಿಕಾರಿ ಆದೇಶ

ತುಮಕೂರು: ನಗರ ವ್ಯಾಪ್ತಿಯ 17 ಪರೀಕ್ಷಾ ಕೇಂದ್ರಗಳಲ್ಲಿ ಜನವರಿ 13ರಂದು ಕೆ-ಸೆಟ್ (K-Set) ಪರೀಕ್ಷೆ ನಡೆಯಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷವಿಲ್ಲದಂತೆ ಹಾಗೂ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ. ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಅವರು ಆದೇಶ ಹೊರಡಿಸಿದ್ದಾರೆ.

ನಿಷೇಧಾಜ್ಞೆಯು ಜನವರಿ 13ರ ಬೆಳಿಗ್ಗೆ 9 ರಿಂದ ಸಂಜೆ 3 ಗಂಟೆಯವರೆಗೆ ಜಾರಿಯಲ್ಲಿರುತ್ತದೆ. ಈ ನಿಷೇಧಾಜ್ಞೆಯನ್ವಯ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಬೆರಳಚ್ಚು ಕೇಂದ್ರಗಳನ್ನು ಮುಚ್ಚತಕ್ಕದ್ದು. ನಿಷೇಧಾಜ್ಞೆ ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘನೆ ಮಾಡಿದ ವ್ಯಕ್ತಿಗಳನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ.



ಕೆಲವು ಪ್ರಕರಣಗಳಲ್ಲಿ ದುರುದ್ದೇಶದಿಂದ ನಕಲಿ ಪ್ರಶ್ನೆಪತ್ರಿಕೆಗಳ ಫೋಟೋಗಳನ್ನು ತೆಗೆದು ವಾಟ್ಸಆಪ್ ಇತರೆ ಸಾಮಾಜಿಕ ಜಾಲತಾಣಗಳ ಮೂಲಕ ಕಳುಹಿಸಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿ ಮಾಡಲು ಅವಕಾಶವಿರುವುದರಿಂದ ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಕ್ಯಾಮರಾ ಇಲ್ಲದಿರುವ ಸಾಮಾನ್ಯ ಮೊಬೈಲ್ ಇರಿಸಿಕೊಳ್ಳಲು ಅವಕಾಶ ನೀಡಲಾಗಿದೆ.

ಉಳಿದ ಎಲ್ಲಾ ಪರೀಕ್ಷಾ ಸಿಬ್ಬಂದಿ, ವಿದ್ಯಾರ್ಥಿಗಳು ಮೊಬೈಲ್ ತರುವುದು, ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಿದೆ.

ಜಿಲ್ಲೆಯಲ್ಲಿ ಪ್ರಶ್ನೆ ಪತ್ರಿಕೆಗಳ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡುವಂತಹ ವ್ಯಕ್ತಿಗಳು ಕಂಡುಬಂದಲ್ಲಿ ದಂಡ ಪ್ರಕ್ರಿಯಾ ಸಂಹಿತೆ 1973 ಸೆಕ್ಷನ್ 107 ಮತ್ತು 110ರ ಅಡಿ ಅಗತ್ಯ ಮುಂಜಾಗ್ರತಾ ಕ್ರಮಕೈಗೊಳ್ಳಲಾಗುವುದು ಎಂದು ಅವರು ಸೂಚಿಸಿದ್ದಾರೆ.

## 12ರಂದು ಕೊಟಬಾಗಿಯಲ್ಲಿ ಬೃಹತ್ ಸಮಾವೇಶ: ಸುರೇಶ ತಳವಾರ

ಹುಕ್ಕೇರಿ: ತಾಲೂಕಿನ ಕೊಟಬಾಗಿಯಲ್ಲಿ ಇದೇ ತಿಂಗಳು ಜ. 12 ರಂದು ದೇಶದ ಪ್ರಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಹಾಗೂ ಸ್ವಾಮಿ ವಿವೇಕಾನಂದರ ಜಯಂತ್ಯೋತ್ಸವದ ನಿಮಿತ್ತ ಬೃಹತ್ ಸಮಾವೇಶ ಏರ್ಪಡಿಸಲಾಗಿದೆ ಎಂದು ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ಮಾಜಿ ನಿರ್ದೇಶಕರೂ ಆದ ಸಂಘಟಕ ಸುರೇಶ ತಳವಾರ ಹೇಳಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ಸಮಾವೇಶದ ಕರಪತ್ರ, ಬ್ಯಾನರ್ ಬಿಡುಗಡೆ, ಪೂರ್ವಭಾವಿ ಸಭೆ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಇಬ್ಬರು ಮಹಾನ್ ವ್ಯಕ್ತಿಗಳ ಜಯಂತಿಯನ್ನು ಅದ್ದೂರಿ, ಸಡಗರ-ಸಂಭ್ರಮದಿಂದ ಆಚರಿಸಲು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ಅಂದು ಬೆಳಗ್ಗೆ 10 ಗಂಟೆಗೆ ಕೊಟಬಾಗಿ ದಾಸನಟ್ಟಿ ಪ್ಲಾಟ್‌ನ ಅಂಬೇಡ್ಕರ ಸಮುದಾಯ ಭವನದಲ್ಲಿ ಸಾವಿತ್ರಿಬಾಯಿ ಫುಲೆ, ಸ್ವಾಮಿ ವಿವೇಕಾನಂದರ ಜಯಂತಿ ಆಚರಿಸಲಾಗುವುದು. ಬೆಳವಿ ಶರಣಬಸವ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ರಾಯವ್ವಗೋಳ ಉದ್ಘಾಟಿಸುವರು.

ಸಂತೋಷ ದೊಡಮನಿ ಉಪನ್ಯಾಸ ನೀಡಲಿದ್ದು ಗ್ರಾಪಂ ಅಧ್ಯಕ್ಷ ಬಸವರಾಜ ಭೂಸಾರಿ, ವಿವಿಧ ದಲಿತ ಮುಖಂಡರು, ಅಧಿಕಾರಿಗಳು ಭಾಗವಹಿಸುವರು ಎಂದು ಅವರು ಹೇಳಿದರು.

ಸಮಾವೇಶದಲ್ಲಿ ಸಮಾಜ ಸೇವೆಗೆ ಅನುಪಮ ಕೊಡುಗೆ ನೀಡಿದ ದಲಿತ ಮುಖಂಡರು, ನ್ಯಾಯವಾದಿಗಳು, ಪತ್ರಕರ್ತರು, ಗ್ರಾಮ ಪಂಚಾಯಿತಿ ಸದಸ್ಯರನ್ನು ಸನ್ಮಾನಿಸಲಾಗುವುದು. ಮಧ್ಯಾಹ್ನ 3ಕ್ಕೆ ಭಾಷಣ ಸ್ಪರ್ಧೆ, ಸಂಜೆ 5ಕ್ಕೆ ಮುಕ್ತ ನೃತ್ಯ ಸ್ಪರ್ಧೆ ಆಯೋಜಿಸಲಾಗಿದೆ. ಈ ಬೃಹತ್ ಸಮಾವೇಶದಲ್ಲಿ ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಸಹಸ್ರಾರು ಜನರು ಸೇರುವ ನಿರೀಕ್ಷೆಯಿದೆ. ಸಮಾವೇಶದ ಹಿನ್ನಲೆಯಲ್ಲಿ ಗ್ರಾಮದಲ್ಲಿ ಹಬ್ಬದ ವಾತಾವರಣ ನೆಲೆಯೂರಿದ್ದು ಇಡೀ ಗ್ರಾಮವನ್ನು ನೀಲಿಮಯಗೊಳಿಸಲಾಗುವುದು. ಮಹಾನ್ ಪುರುಷರ ಕಟೌಟ್, ಸ್ವಾಗತ ಕಮಾನು, ಪ್ರಮುಖ ವೃತ್ತಗಳನ್ನು ವಿದ್ಯುತ್ ದೀಪಾಲಂಕಾರದಿಂದ ಶೃಂಗರಿಸಲಾಗುವುದು ಎಂದು ಅವರು ವಿವರಿಸಿದರು.

ಮುಖಂಡರಾದ ಶ್ರೀಕಾಂತ ತಳವಾರ, ಉದಯ ಹುಕ್ಕೇರಿ, ಬಸವರಾಜ ಖಡಕಢಭಾಂವಿ, ಸದಾಶಿವ ಕಾಂಬಳೆ, ಅಪ್ಪಣ್ಣಾ ಖಾತೇದಾರ, ಮಾರುತಿ ತಳವಾರ, ದೀಪಕ ವೀರಮುಖ, ರಮೇಶ ಹುಂಜಿ, ಗಂಗರಾಮ ಭೂಸಗೋಳ, ರಾಜೇಂದ್ರ ಮೋಶಿ, ಶಿವಾನಂದ ಮರಿನಾಯಿಕ, ಪ್ರಮೋದ ಹೊಸಮನಿ, ಮಹೇಶ ಹಟ್ಟಿಹೊಳಿ, ಕುಮಾರ ತಳವಾರ, ಶಂಕರ ತಿಪ್ಪನಾಯಿಕ, ಅಕ್ಷಯ ವೀರಮುಖ, ಮುತ್ತು ಕಾಂಬಳೆ, ಮಂಜು ಕಾಮತ, ಕಾಶಪ್ಪಾ ಹರಿಜನ, ನಾಗೇಶ ಸಣ್ಣಕ್ಕಿ, ಶಿವು ಕಣಗಲಿ, ಬಾಳು ಕೋಳಿ, ಸಂತೋಷ ಗಸ್ತಿ, ಉಮೇಶ ಮಾಳಗೆ ಮತ್ತಿತರರು ಉಪಸ್ಥಿತರಿದ್ದರು.

## ಮಲಗಿದ್ದಲ್ಲೇ ಚಿರನಿದ್ರೆಗೆ ಜಾರಿದ ಐವರು

ಉತ್ತರ ಪ್ರದೇಶ: ಉತ್ತರ ಪ್ರದೇಶದ ಅಮ್ರೋಹಾ ಜಿಲ್ಲೆಯಲ್ಲಿ ಮನೆಯಲ್ಲಿ ಮಲಗಿದ್ದ ಕುಟುಂಬದ ಏಳು ಮಂದಿಯಲ್ಲಿ ಮಕ್ಕಳು ಸೇರಿದಂತೆ ಐದು ಮಂದಿ ಶವವಾಗಿ ಪತ್ತೆಯಾಗಿರುವ ದಾರುಣ ಘಟನೆ ಬೆಳಕಿಗೆ ಬಂದಿದ್ದು ಇಬ್ಬರ ಸ್ಥಿತಿ ಚಿಂತಾಜನಕವಾಗಿದ್ದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.



ಮೃತರನ್ನು ಸೋನಂ (19), ವಾರಿಸ್ (17), ಮೆಹಕ್ (16), ಜೈದ್ (15) ಮತ್ತು ಮಾಹಿರ್ (12) ಎಂದು ಗುರುತಿಸಲಾಗಿದೆ.

ಕಳೆದ ಸೋಮವಾರ ರಾತ್ರಿ ರಹೀಸುದ್ದೀನ್ ಕುಟುಂಬದ ಏಳು ಮಂದಿ ಸದಸ್ಯರು ಊಟ ಮಾಡಿ ಮಲಗಿದ್ದಾರೆ ಮಂಗಳವಾರ ಸಂಜೆಯವರೆಗೂ ಮನೆಯ ಬಾಗಿಲು ತೆರೆಯಲಿಲ್ಲ ಇದರಿಂದ ಅನುಮಾನಗೊಂಡ ಪಕ್ಕದ ಮನೆಯ ಸದಸ್ಯರು ಬಾಗಿಲು ಬಡಿದಿದ್ದಾರೆ ಆದರೆ ಒಳಗಿನಿಂದ ಯಾವುದೇ ಉತ್ತರ ಬರಲಿಲ್ಲ, ಇದರಿಂದ ಅನುಮಾನಗೊಂಡ ನೆರೆಮನೆಯವರು ಬಾಗಿಲು ಮುರಿದು ಒಳ ಪ್ರವೇಶಿಸಿದವರು ಬೆಚ್ಚಿ ಬಿದ್ದಿದ್ದಾರೆ ಕಾರಣ ಮನೆಯಲ್ಲಿದ್ದ ಏಳು ಮಂದಿಯಲ್ಲಿ ಐದು ಮಂದಿ ಶವವಾಗಿ ಪತ್ತೆಯಾಗಿದ್ದರೆ ಇಬ್ಬರು ಗಂಭೀರ ಸ್ಥಿತಿಯಲ್ಲಿ ಒದ್ದಾಡುತ್ತಿದ್ದರು.

ಇದನ್ನು ಕಂಡ ನೆರೆಮನೆಯವರು ಕೂಡಲೆ ವಿಚಾರ ಪೊಲೀಸರಿಗೆ ತಿಳಿಸಿದ್ದಾರೆ ಅಲ್ಲದೆ ಗಂಭೀರ ಸ್ಥಿತಿಯಲ್ಲಿದ್ದ ಇಬ್ಬರನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಿದ್ದಾರೆ.

# ತ್ಯಾಗವೀರ ಲಿಂಗರಾಜರ ಬದುಕು ಇಂದಿಗೂ ಅಮರ: ಡಾ.ಗುರುಪಾದ ಮರಿಗುದ್ದಿ

ಬೆಳಗಾವಿ: ಸಮಾಜದ ಕಲ್ಯಾಣಕ್ಕೆ ಶಿಕ್ಷಣವೇ ಮೂಲವೆಂದು ತಿಳಿದ ಲಿಂಗರಾಜರು ತಮ್ಮ ಇಡೀ ಸಂಪತ್ತನ್ನು ಶಿಕ್ಷಣಕ್ಕೆ ಮೀಸಲಾಗಿಟ್ಟಿದ್ದು ಭಾರತದ ಚರಿತ್ರೆಯಲ್ಲಿಯೇ ಅಪರೂಪವೆನಿಸಿದೆ. ಸಮಾಜದ ಸುಖವೇ ತನ್ನ ಸುಖವೆಂದು ಎಲ್ಲವನ್ನೂ ಧಾರೆ ಎರೆದ ಲಿಂಗರಾಜರು ಇಂದಿಗೂ ಅಮರರೆನಿಸಿದ್ದಾರೆ ಎಂದು ಸಾಹಿತಿ ಡಾ.ಗುರುಪಾದ ಮರಿಗುದ್ದಿ ಹೇಳಿದರು.

ಅವರು ಲಿಂಗರಾಜ ಕಾಲೇಜಿನಲ್ಲಿ ಬೆಳಗಾವಿಯ ಎಲ್ಲಕೆಎಲ್ ಇಅಂಗ ಸಂಸ್ಥೆಯ ಆಶ್ರಯದಲ್ಲಿ ಜರುಗಿದ ಸಿರಸಂಗಿ ಲಿಂಗರಾಜರ 163ನೇ ಜಯಂತಿ ಉತ್ಸವದಲ್ಲಿ ಅತಿಥಿಗಳಾಗಿ ಮಾತನಾಡಿದರು.

ಲಿಂಗರಾಜರು ಸಮಾಜದ ಉದಾತ್ತ ಉದ್ದೇಶಕ್ಕಾಗಿ ಮಹಾದಾನ ನೀಡಿ ಔದಾರ್ಯವನ್ನು ಮೆರೆದಿದ್ದಾರೆ. ಅವರ ಬದುಕು ಸುಖದ ಸುಪತ್ತಿಕೆಯಾಗಿರಲಿಲ್ಲ. ಕೌಟುಂಬಿಕವಾಗಿ ಬವಣೆಗಳಿಂದ ನೊಂದುಕೊಂಡರು. ನೂರೆಂಟು ಕಷ್ಟಗಳನ್ನು ಎದುರಿಸಿದರು. ಜೀವನದ ಕೊನೆಗೆ ತಮ್ಮ ಸಮಸ್ತ ಚಿರಾಸ್ಥಿಯನ್ನು ಸಮಾಜದ ಮಕ್ಕಳ ಕಲ್ಯಾಣಕ್ಕಾಗಿ ಸಮರ್ಪಿಸಿದರು. ಕೃಷಿ, ನೀರಾವರಿ ಮೊದಲ್ಗೊಂಡು ಹಲವಾರು ಮೌಲಿಕ ಸಾಮಾಜಿಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿ ಕೊಂಡರು. ಅಂತಹ ಪ್ರಾಥಃ ಸ್ಮರಣೀಯರು ಇಂದಿನ ಯುವ ಪೀಳಿಗೆಗೆ ಅನುಕರಣೀಯರು. ಇಂದು ಕೆಎಲ್ಇಯಎಲ್ಲ ಅಂಗ ಸಂಸ್ಥೆಗಳಲ್ಲಿ ಅವರಜಯಂತಿಯನ್ನು ಆಚರಿಸಿ ಮಕ್ಕಳಲ್ಲಿ ಅವರದಾನದ, ತ್ಯಾಗದಕುರಿತು



ಹೇಳುತ್ತಿರುವುದು ಅಭಿನಂದನೀಯವೆನಿಸಿದೆ ಎಂದರು.

ದಿವ್ಯ ಸಾನ್ನಿಧ್ಯವಹಿಸಿದ್ದ ಧಾರವಾಡ ಮುರಘಾಮಠದ ಪೂಜ್ಯ ಡಾ.ಮಲ್ಲಿಕಾರ್ಜುನ ಮಹಾಸ್ವಾಮೀಜಿ ಯವರು ಆಶೀರ್ವಚನ ನೀಡುತ್ತಾ, ಲಿಂಗರಾಜರಂತಹ ಪುಣ್ಯಾತ್ಮರನ್ನು ಸ್ಮರಿಸುವುದು ನಿಜಮುಕ್ತಿ ಇದ್ದಂತೆ. ಅವರ ಮರವೇ ಅಸ್ತಮಾನ. ಸಮಸ್ತ ನಾಡಿಗೆಅವರು ನೀಡಿದ ಕೊಡುಗೆ ಅನನ್ಯ ಅನುಪಮ. ಅವರಂತಹ ದಾನಿಗಳು ಹಿಂದೆಯೂಇರಲಿಲ್ಲ, ಇಂದಿಗೂ ಹುಟ್ಟಿಲ್ಲವೆನ್ನಬೇಕು. ಬದುಕಿನುದ್ದಕ್ಕೂಅನೇಕ ಜನೋಪಯೋಗಿ ಕಾರ್ಯಗಳನ್ನು ನಿರ್ವಹಿಸಿದರು. ಲಿಂಗರಾಜರತ್ಯಾಗದಲ್ಲಿ ಒಂದು ವೈಶಿಷ್ಟ್ಯವುಂಟು, ಅವರು ಸ್ವಾರ್ಥವನ್ನು ಸಂಪೂರ್ಣವಾಗಿ ಮರೆತು ತಮ್ಮ ಇಡಿಯ ಆಸ್ತಿಯನ್ನು ಸಮಾಜದ ಶಿಕ್ಷಣಕ್ಕಾಗಿ ಧಾರೆಯೆರೆದರು. ಅಂತಹ ಮಹಾತ್ಮರನ್ನು ಇಂದಿನ ಯುವಪೀಳಿಗೆ ತಿಳಿದು ಕೊಳ್ಳುವುದು ಅಗತ್ಯವಿದೆ ಎಂದು ನುಡಿದರು.

ಕೆಎಲ್ಇ ಉಪಾಧ್ಯಕ್ಷರಾದ ಬಸವರಾಜ ತಟವಟಿಯವರು ಅಧ್ಯಕ್ಷೀಯ ನುಡಿಗಳನ್ನಾಡಿ ಜನತೆಯ ಹಿತಕ್ಕಾಗಿ ಬದುಕಿದ ಮಹಾಚೇತನ ಸಿರಸಂಗಿ ಲಿಂಗರಾಜರು. ಸಮಾಜದ ಪ್ರತಿಯೊಬ್ಬರೂ ಸುಶಿಕ್ಷಿತರಾಗಬೇಕು, ಮುಂದೆ ಬರಬೇಕು, ಬದುಕಿನ ಕಷ್ಟಗಳನ್ನು ತೊಡೆದು ಹಾಕಬೇಕೆಂಬ ಸಂಕಲ್ಪದೊಂದಿಗೆ ಶಿಕ್ಷಣ ರಂಗಕ್ಕೆಆರ್ಥಿಕ ಮತ್ತುಜ್ಞಾನದ ಶಕ್ತಿಯನ್ನು ತುಂಬಿದರು. ವ್ಯಕ್ತಿಯೊಬ್ಬನಿಗೆ ಕೊಡುವ ದಾನಕ್ಕಿಂತಲೂ ಶಿಕ್ಷಣ ಸಂಘ ಸಂಸ್ಥೆಗಳಿಗೆ ಕೊಡುವದಾನ ಶ್ರೇಷ್ಠವೆಂದು ತಿಳಿದರು.

ಸಮಾಜಕ್ಕೆ ಪ್ರೇರಕರಾದರು ಅವರ ಇಚ್ಛೆಯಂತೆ ಪ್ರಾರಂಭವಾದ 'ಸಿರಸಂಗಿ ನವಲಗುಂದಟ್ರಸ್ಟ್' ಸಾವಿರಾರೂ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಧನಸಹಾಯ ಇಂದಿಗೂ ನೀಡುತ್ತಿದೆ. ಇಂತಹತ್ಯಾಗವೀರ ಸಿರಸಂಗಿ ಲಿಂಗರಾಜರ ವ್ಯಕ್ತಿತ್ವಕ್ಕೆ ಮಾರುಹೋದ ನಮ್ಮ ಕೆಎಲ್ಇ ಸಂಸ್ಥೆಯ ಏಳು ಜನ ಶಿಕ್ಷಕರು ಅವರ ಆದರ್ಶವನ್ನೇ ಇಟ್ಟುಕೊಂಡು 1916 ರಲ್ಲಿ ಕೆಎಲ್ಇ ಸಂಸ್ಥೆಯನ್ನು ಹುಟ್ಟು ಹಾಕಿದರು. 1933ರಲ್ಲಿ ಪ್ರಥಮ ಪದವಿ ಕಾಲೇಜಿಗೆ ಲಿಂಗರಾಜರ ಮೇಲಿನ ಅಭಿಮಾನದಿಂದಾಗಿ 'ಲಿಂಗರಾಜ ಮಹಾವಿದ್ಯಾಲಯ'ವೆಂದು ನಾಮಕರಣ ಮಾಡಿದರು ಎಂದು ಹೇಳಿದರು.

ಡಾ.ಎಚ್.ಎಂ. ಚೆನ್ನಪ್ಪಗೋಳ ವಂದಿಸಿದರು. ಡಾ.ಮಹೇಶ ಗುರನಗೌಡರ ಹಾಗೂ ಪ್ರೊ.ಸಿದ್ಧನಗೌಡ ಪಾಟೀಲ ನಿರೂಪಿಸಿದರು. ಪ್ರಾಚಾರ್ಯ ಡಾ.ಎಚ್.ಎಸ್. ಮೇಲಿನಮನಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಎಫ್.ವ್ಹಿ.ಮಾನ್ವಿ, ಶ್ರೀಮತಿ ಸುಧಾಉಪ್ಪಿನ, ರಾಜಶ್ರೀ ಸಂಬರಗಿಮಠ ಆಗಮಿಸಿದ್ದರು. ಮಾಹೇಶ್ವರಅಂಧ ಮಕ್ಕಳ ಶಾಲೆ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಜಯಂತಿಉತ್ಸವದ ನಿಮಿತ್ತ ಡಾ.ಪ್ರಭಾಕರಕೋರೆ ರಕ್ತಭಂಡಾರ ಸಹಯೋಗದೊಂದಿಗೆ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. 60 ಯುನಿಟ್‌ರಕ್ತವನ್ನು ದಾನಿಗಳಿಂದ ಸಂಗ್ರಹಿಸಲಾಯಿತು.

# ಸಾರ್ವಜನಿಕರ ಅನಕೂಲಕ್ಕಾಗಿ ಆಶ್ರಯ ಕೇಂದ್ರಗಳ ಮಾಹಿತಿ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯ ಡೇ-ನಲ್ಮ ಯೋಜನೆ ಅಡಿಯಲ್ಲಿ 5 ನಿರಾಶ್ರಿತರ ಆಶ್ರಯ ಕೇಂದ್ರಗಳನ್ನು ಜಯ ಭಾರತ ಮಾತೆ ಗ್ರಾಮೀಣಾಭಿವೃದ್ಧಿ ಸಂಸ್ಥೆಯವರು ನಿರ್ವಹಿಸುತ್ತಿದ್ದು, ಸದರಿ ಕೇಂದ್ರಗಳಲ್ಲಿ ನಿರ್ಗತಿಕರು, ವಸತಿರಹಿತರು ವಾಸಿಸಲು ಯಾವುದೇ ಶುಲ್ಕವಿಲ್ಲದೆ ಕೇಂದ್ರಗಳಲ್ಲಿ ಉಚಿತವಾಗಿ ವೈದ್ಯಕೀಯ ತಪಾಸಣೆ ಮತ್ತು ಅಶಕ್ತರಿಗೆ ಊಟದ ಸೌಲಭ್ಯವಿರುತ್ತದೆ,

ಅದೇ ರೀತಿಯಲ್ಲಿ ರಾತ್ರಿ ಬೇರೆ ಊರಿಗೆ ಹೋಗಲು ಬಸ್‌ನ ತೊಂದರೆಯಾದವರು ಮತ್ತು ವಾಸಿಸಲು ಮನೆ ಸೌಲಭ್ಯ ಇಲ್ಲದವರು ಇದರ ಸೌಲಭ್ಯ ಪಡೆದುದುಕೊಳ್ಳಬಹುದಾಗಿದೆ.

ನಿರಾಶ್ರಿತರ ವಸತಿರಹಿತ ಆಶ್ರಯಕೇಂದ್ರ (ಪುರುಷ) ಹಳೇ ಪಿ.ಬಿ.ರಸ್ತೆ, ಯಡಿಯುರಪ್ಪ ಮಾರ್ಗ, ಖಾಸಭಾಗ, ಬೆಳಗಾವಿ ಇಲ್ಲಿನ ಸಂಯೋಜಕರು ರಾವಸಾಬ ಶಿರಹಟ್ಟಿ ಮೋ. ಸಂಖ್ಯೆ: 8618944113 ಸಂಪರ್ಕಿಸಬಹುದಾಗಿದೆ.



ಮಹಾಂತೇಶ ನಗರ ನಿರಾಶ್ರಿತರ ವಸತಿರಹಿತ ಆಶ್ರಯಕೇಂದ್ರ (ಪುರುಷ) ವ್ಯವಸಾಪ್ಥಕರು ಬಾಳೇಶ ಪೂಜಾರಿ ಮೋ. ಸಂಖ್ಯೆ: 8951129427 ಹಾಗೂ ಮಹಾದ್ವಾರ ರಸ್ತೆ, ಮಹಾವೀರ ಬಿಲ್ಡಿಂಗ್ ನಿರಾಶ್ರಿತರ ವಸತಿರಹಿತ ಆಶ್ರಯಕೇಂದ್ರ (ಪುರುಷ) ಇಲ್ಲಿನ ವ್ಯವಸಾಪ್ಥಕರು ಅಭಿಷೇಕ ಮೋ. ಸಂಖ್ಯೆ 8050212214ಗರ ಸಂಪರ್ಕಿಸಬಹುದಾಗಿದೆ.

ರಾಮತೀರ್ಥ ನಗರದ ಬುಡಾ ಪ್ಲಾಟ 220 ನಲ್ಲಿರುವ ನಿರಾಶ್ರಿತರ ವಸತಿರಹಿತ ಆಶ್ರಯಕೇಂದ್ರದ (ಪುರುಷ) ವ್ಯವಸಾಪ್ಥಕರು ಹಣುಮಂತ ಪಾಟೀಲ ಇವರ ಮೋ. ಸಂಖ್ಯೆ 8197572201 ಹಾಗೂ ಮಾಳ ಮಾರುತಿ ಬಡಾವಣೆಯ ಮಹೇಶ ಪಿ.ಯು ಕಾಲೇಜು ಹಿಂಭಾಗ, ಸೆಕ್ಟರ್ ನಂ.9 ಇಲ್ಲಿನ ನಿರಾಶ್ರಿತರ ವಸತಿರಹಿತ ಆಶ್ರಯಕೇಂದ್ರದ (ಮಹಿಳಾ&ಮಕ್ಕಳು) ಅನೀತಾ ಆರ್.ಎಸ್ ಇವರ ಮೋ. ಸಂಖ್ಯೆ: 6363334042 ಇವರಿಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾಧಿಕಾರಿ ನಿತೇಶ ಪಾಟೀಲ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.12 ಮತ್ತು 13 ರಂದು ಧರ್ಮ ಕಾಯ್ವರ ಹೆಗಲು ಮಹಾ ಸಮಾವೇಶ

ಬೆಳಗಾವಿ: ಕೊಲ್ಲಾಪುರ ಸಮೀಪವಿರುವ ಕನ್ನೇರಿಯ ಶ್ರೀ ಸಿದ್ಧಗಿರಿ ಸಂಸ್ಥಾನದಲ್ಲಿ ಜ.12 ಮತ್ತು 13 ರಂದು ಸಾವಯವ ಕೃಷಿ, ಬದುಕಿಗೆ ಒತ್ತು ನೀಡುವ ಉದ್ದೇಶದಿಂದ ಭೂತಾಯ ಕಾಯಕಕ್ಕೆ ಧರ್ಮ ಕಾಯ್ವರ ಹೆಗಲು ಎಂಬ ಮಹಾ ಸಮಾವೇಶ ನಡೆಸಲಾಗುತ್ತಿದೆ ಎಂದು ಕನ್ನೇರಿ ಮಠದ ಶ್ರೀ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಹಾಗೂ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಜಂಟಿಯಾಗಿ ತಿಳಿಸಿದ್ದಾರೆ.

ಸಾವಯವ ಕೃಷಿ ಪರಿವಾರ ಮತ್ತು ಸುಭೀಕ್ಷ್ಯಾ ಆರ್ಗ್ಯಾನಿಕ್ ಫಾರ್ಮಸ್ ಮಲ್ಟಿಸ್ಟೇಟ್ ಕೋ ಆಪರೇಟಿವ್ ಸೊಸೈಟಿ ಲಿಮಿಟೆಡ್ ಸಂಸ್ಥೆಗಳು ಈ ಸಮಾವೇಶವನ್ನು ಸಂಘಟಿಸುತ್ತಿವೆ. ಈ ಸಮಾವೇಶದಲ್ಲಿ ನಾಡಿನ ಎಲ್ಲ ಮಠಾಧೀಶರು, ಸಂತರು, ಧರ್ಮದರ್ಶಿಗಳು, ಶಿಕ್ಷಣ ತಜ್ಞರು, ವಿಜ್ಞಾನಿಗಳು, ತೋಟಗಾರಿಕೆ ಮತ್ತು ಪಶುವೈದ್ಯಕೀಯ ವಿಶ್ವವಿದ್ಯಾಲಯದ ಕುಲಪತಿಗಳು ಹಾಗೂ ರೈತರು ಭಾಗವಹಿಸಲಿದ್ದಾರೆ.

ಮಹಾಸಮಾವೇಶವು ಸಾವಯವ ಕೃಷಿ, ಜೀವ ವೈವಿಧ್ಯ,



ಗ್ರಾಮ ಜೀವನ ಸುಧಾರಣೆ, ಗೋ ಸಂರಕ್ಷಣೆ, ಪರಿಸರ ಸಂರಕ್ಷಣೆ, ಸಾವಯವ ಮಾರುಕಟ್ಟೆ, ಗ್ರಾಮೀಣ ಯುವ ಜನತೆಯಲ್ಲಿ ಕೃಷಿ ಮಹತ್ವದ ಅರಿವು, ಅವಿವಾಹಿತ ಕೃಷಿ ಕ್ಷೇತ್ರದ ಯುವಕರಿಗೆ ಕಂಕಣ ಭಾಗ್ಯ, ಚಿಕ್ಕ ಹಿಡುವಳಿಯಲ್ಲಿ ಚೊಕ್ಕ ಜೀವನ, ಅಮೃತ ದಾಸೋಹ ಸೇರಿದಂತೆ ಅನೇಕ ವಿಷಯಗಳ ಕುರಿತು ಚರ್ಚೆ ನಡೆಸಿ ನಿರ್ಣಯ ಕೈಗೊಳ್ಳುವ ಯೋಜನೆ ರೂಪಿಸಲಾಗಿದೆ. ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಬೇಕೆಂದು ಶ್ರೀಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಕೂಟಿ ಕೀ ಕೊಡಲಿಲ್ಲವೆಂದು ದೊಡ್ಡಮ್ಮಳ ಕೊಲೆ



ಅಥಣಿ: ಸ್ಕೂಟಿ ಕೀ ಕೊಡಲಿಲ್ಲ ಎಂಬ ಕಾರಣಕ್ಕಾಗಿ ಯುವಕನೊಬ್ಬ ತಮ್ಮ ದೊಡ್ಡಮ್ಮಳಿಗೆ ಕಬ್ಬಿಣದ ಸಲಾಕೆಯಿಂದ ಹೊಡೆದು ಕೊಲೆ ಮಾಡಿದ ದುರ್ಘಟನೆ ತಾಲೂಕಿನ ಸಂಬರಗಿ ಗ್ರಾಮದಲ್ಲಿ ನಡೆದಿದೆ.

ಗಂಭೀರ ಗಾಯಗೊಂಡಿದ್ದ ಮಂಗಲ ತುಕಾರಾಮ ಸಾವಡಕರ (55) ಅವರನ್ನು ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ಮೃತ ಪಟ್ಟಿದ್ದಾರೆ. ಸಂಜಯ ರಾಜಾರಾಮ ಸಾವಡಕರ (25) ಕೊಲೆ ಮಾಡಿದ ವ್ಯಕ್ತಿ. ಆರೋಪಿ ಸಂಜಯ ತಾಯಿ ಮರಣ ಹೊಂದಿದ ನಂತರ ಈತನನ್ನು ತಮ್ಮ ದೊಡ್ಡಮ್ಮ ನೋಡಿಕೊಂಡಿದ್ದಳು.

ಮಹಿಳೆ ಬಯಲು ಶೌಚಕ್ಕೆ ಹೋಗುವ ಮಾರ್ಗಮದ್ಯದಲ್ಲಿ ಹಲ್ಲೆ ಮಾಡಿದ ಆರೋಪಿ ಸಂಜಯ ಈತನು ಕಬ್ಬಿಣದ ಸಲಾಕೆಯಿಂದ ಹಲ್ಲೆ ನಡೆಸಿ ಗಂಭೀರ ಗಾಯಗೊಳಿಸಿದ್ದ ನಂತರ ಮೃತ ಮಂಗಳ ಕಿರಿಚಾಟ ಕೇಳಿ ಕುಂಟುಂಬಸ್ಥರು ಹೋಗಿ ನೋಡಲಾಗಿ ಆರೋಪಿ ಸಂಜಯ ಅಲ್ಲಿಂದ ಪರಾರಿ ಆಗಿದ್ದ ಅಂತಾ ಪ್ರತ್ಯಕ್ಷದರ್ಶಿ ಮೃತ ಮಹಿಳೆಯ ಸೊಸೆ ಮಾಹಿತಿ ನೀಡಿದ್ದಾರೆ.

ನಂತರ ಹಲ್ಲೆಗೆ ಒಳಗಾದ ಮಂಗಲ ಅವರನ್ನು ಪಕ್ಕದ ಮಹಾರಾಷ್ಟ್ರ ರಾಜ್ಯದ ಮಿರಜ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಗಂಭೀರವಾಗಿ ಗಾಯಗೊಂಡ ಮೃತ ಮಂಗಲ್ ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದಾರೆ. ಅಥಣಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ತಲೆ ಮರೆಸಿಕೊಂಡಿದ್ದ ಆರೋಪಿ ಸಂಜಯನನ್ನು ಅಥಣಿ ಪೊಲೀಸರು ಬಂಧಿಸಿದ್ದಾರೆ.

### ಬೆಳಗಾವಿಯಲ್ಲಿ ನಿಂತ ಲಾರಿಗೆ ಗುದ್ದಿದ ಕಾರು

# ಯುವ ವೈದ್ಯ ಸಾವು-ಇಬ್ಬರಿಗೆ ಗಾಯ



ಬೆಳಗಾವಿ: ರಸ್ತೆ ಬಳಿ ನಿಂತ ಲಾರಿಗೆ ಕಾರು ಡಿಕ್ಕಿ ಹೊಡೆದು ಯುವ ವೈದ್ಯ ಮೃತಪಟ್ಟಿದ್ದು, ಇಬ್ಬರು ಎಂಬಿಎ ಪದವೀಧರರು ಗಂಭೀರವಾಗಿ ಗಾಯಗೊಂಡ ಘಟನೆ ಮಂಗಳವಾರ ರಾತ್ರಿ ಬೆಳಗಾವಿಯಲ್ಲಿ ನಡೆದಿದೆ.

ನಗರದ ಯಡಿಯೂರಪ್ಪ ಮಾರ್ಗದಲ್ಲಿ ಈ ದುರ್ಘಟನೆ ನಡೆದಿದ್ದು, ಬಾಗಲಕೋಟೆ ಜಿಲ್ಲೆಯ ಜಮಖಂಡಿಯ ಯುವ ವೈದ್ಯ ಸೌರಭ ಕಾಂಬಳೆ (25)ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಜಮಖಂಡಿಯ ಗಿರೀಶ್ ಕರೆಮ್ಮನವರ(25) ಮತ್ತು ಚೇತನ ಧರಿಗೌಡರ( 25 ) ಗಂಭೀರವಾಗಿ ಗಾಯಗೊಂಡಿದ್ದಾರೆ.

ಗಾಯಾಳುಗಳನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೂವರು ಮಂಗಳವಾರ ತಡ ರಾತ್ರಿ ಪಾರ್ಟಿ ಮುಗಿಸಿ ವಾಪಸ್ ಆಗುವಾಗ ಈ ದುರ್ಘಟನೆ ನಡೆದಿದೆ. ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಕಾರು ವೇಗವಾಗಿ ಬಂದು ಗುದ್ದಿದೆ. ಡಿಕ್ಕಿ ಆದ ರಭಸಕ್ಕೆ ಕಾರು ನಾಲ್ಕೈದು ಸಲ ಮಗುಚಿದೆ. ಸ್ಥಳಕ್ಕೆ ಬೆಳಗಾವಿ ದಕ್ಷಿಣ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.

# ಹಿರಿಯ ಸಾಹಿತಿ ಬಿ. ಎಸ್. ಗವಿಮಠರ ಮನವಿ

ಬೆಳಗಾವಿ: ಭಾರತಕ್ಕೆ ಸ್ವಾತಂತ್ರ್ಯ ಲಭಿಸಿದ್ದು 1947 ರಲ್ಲಿ. ಅದಕ್ಕೂ ಮುಂಚೆ ಬೆಳಗಾವಿ ಮುಂಬಯಿ ಪ್ರಾಂತದ- ಬ್ರಿಟಿಷ ಆಡಳಿತಕ್ಕೆ ಒಳಪಟ್ಟಿತ್ತು. ಮುಂಬಯಿ ಪ್ರಾಂತದ ದಕ್ಷಿಣದಲ್ಲಿ ನಾಲ್ಕು ಜಿಲ್ಲೆಗಳು-ಬೆಳಗಾವಿ, ಧಾರವಾಡ, ವಿಜಯಪುರ ಮತ್ತು ಕಾರವಾರ (ಉತ್ತರಕನ್ನಡ) ಜಿಲ್ಲೆಗಳು ಸೇರಿಸಿ ಮುಂಬಯಿ ಕರ್ನಾಟಕವೆಂದು ಕರೆಯುತ್ತಿದ್ದರು.



1947 ರ ಪೂರ್ವದಲ್ಲಿ ಕರ್ನಾಟಕವೂ ಇರಲಿಲ್ಲ, ಮಹಾರಾಷ್ಟ್ರವೂ ಇರಲಿಲ್ಲ. ಕರ್ನಾಟಕ ರಾಜ್ಯ ಉದಯವಾಗಿದ್ದು 1956 ರಲ್ಲಿ. ಮಹಾರಾಷ್ಟ್ರ ರಾಜ್ಯ ನಿರ್ಮಾಣವಾಗಿದ್ದು 1960 ರಲ್ಲಿ. ಬೆಳಗಾವಿ ಎಂದಿಗೂ ಕೋಲ್ಹಾಪುರ ಮತ್ತು ಸಾತಾರಾ ಸಂಸ್ಥಾನಗಳ ಭಾಗವಾಗಿರಲಿಲ್ಲ.

ಕಾರಣ ನಮ್ಮ ಜನಪ್ರತಿನಿಧಿಗಳು ಯಾರೇ ಇರಲಿ ಅತ್ಯಂತ ಸಂವೇದನಾಶೀಲವಾದ ವಿಷಯಗಳ ಬಗ್ಗೆ ಮಾತನಾಡುವಾಗ ಎಚ್ಚರದಿಂದ ಪ್ರಜ್ಞಾಪೂರ್ವಕ ಮಾತನಾಡಬೇಕು. ಕಾರಣ ಕರ್ನಾಟಕ-ಮಾಹಾರಾಷ್ಟ್ರಗಳ ನಡುವಿನ ಗಡಿವಿವಾದ ಸುಪ್ರಿಮ ಕೋರ್ಟನಲ್ಲಿದೆ.

ಯಾರ ಖುಷಿಗಾಗಿ, ತುಷ್ಟೀಕರಣಕ್ಕಾಗಿ ಭಾವನಾತ್ಮಕ ಹೇಳಿಕೆ ಕೊಡಬಾರದು. ಆದ್ದರಿಂದ ಕನ್ನಡ ನಾಡಿಗೆ 'ಕರ್ನಾಟಕ' ಎಂದು ಮರುನಾಮಕರಣವಾಗಿ 50 ವರ್ಷಗಳು ಪೂರ್ತಿಗೊಂಡ ಸಂಧರ್ಬದಲ್ಲಿ ಪ್ರತಿ ಜಿಲ್ಲೆಯಲ್ಲಿ ಕರ್ನಾಟಕ ಏಕೀಕರಣ ಇತಿಹಾಸ, ಹೋರಾಟಗಳ ಪುನರಾವಲೋಕನ ನಡೆಯಲಿ ಸರಕಾರ ವಿಚಾರ ಸಂಕಿರಣಗಳನ್ನು ಏರ್ಪಡಿಸಿ ಯುವಕರಿಗೆ ಮಾರ್ಗದರ್ಶನ ಮಾಡಲಿ ಎಂದು ಮನವಿ ಮಾಡುತ್ತೇನೆ.

# ಗ್ರಾಪಂ ಸದಸ್ಯನ ಆಸ್ತಿ ಕಂಡು ದಂಗಾದ ಲೋಕಾಯುಕ್ತ ಅಧಿಕಾರಿಗಳು

ಬೆಂಗಳೂರು: ರಾಜ್ಯದಲ್ಲಿ ಲೋಕಾಯುಕ್ತ ಪೊಲೀಸರು ಮಹತ್ವದ ಕಾರ್ಯಾಚರಣೆ ನಡೆಸಿದ್ದಾರೆ. ಆರು ಮಂದಿ ಭ್ರಷ್ಟರಿಗೆ ಬಿಸಿ ಮುಟ್ಟಿಸಿದ್ದು, ಆದಾಯ ಮೀರಿ ಅಕ್ರಮವಾಗಿ ಆಸ್ತಿ ಸಂಪಾದಿಸಿದ ಆರೋಪದ ಮೇಲೆ 35 ಕಡೆ ದಾಳಿ ನಡೆಸಿ ಒಟ್ಟು 51.13 ಕೋಟಿ ರೂ. ಮೌಲ್ಯದ ಆಸ್ತಿ ಪತ್ತೆ ಹಚ್ಚಲಾಗಿದೆ.

ದಾಳಿಯ ವೇಳೆ ರಾಮನಗರ ಜಿಲ್ಲೆ ಚನ್ನೇನಹಳ್ಳಿ ಗ್ರಾಮ ಪಂಚಾಯಿತಿ




ಸದಸ್ಯ ಹೆಚ್.ಎಸ್. ಸುರೇಶ್ ಬರೋಬ್ಬರಿ 25 ಕೋಟಿ ರೂಪಾಯಿ ಮೌಲ್ಯದ ಆಸ್ತಿ ಹೊಂದಿರುವುದು ಪತ್ತೆಯಾಗಿದೆ. ಅವರ ಮನೆಯಲ್ಲಿ ವಿದೇಶಿ ಮದ್ಯದ ಬಾಟಲಿಗಳು ಪತ್ತೆಯಾಗಿವೆ.

ಸುರೇಶ್ ಮನೆಯಲ್ಲಿದ್ದ ಕೋಟ್ಯಂತರ ರೂಪಾಯಿ ನಗದು ಜಪ್ತಿ ಮಾಡಲಾಗಿದೆ. ಅವರ ಬಳಿ 25 ಕೋಟಿ ಮೌಲ್ಯದ ಆಸ್ತಿ ಇದೆ. ಸಂಬಂಧಿಕರ ಹೆಸರಿನಲ್ಲಿಯೂ ನೂರಾರು ಕೋಟಿ ರೂಪಾಯಿ ಮೌಲ್ಯದ ಆಸ್ತಿ ಸಂಪಾದಿಸಿರುವ ಶಂಕೆ ವ್ಯಕ್ತವಾಗಿದೆ. ಸುರೇಶ್ ಅವರಿಗೆ ಸೇರಿದ ಆರು ಸ್ಥಳಗಳಲ್ಲಿ ದಾಳಿ ನಡೆಸಲಾಗಿದ್ದು, 16 ನಿವೇಶನ, ಒಂದು ವಾಸದ ಮನೆ, 7.6 ಎಕರೆ ಜಮೀನು, ದುಬಾರಿ ಕಾರುಗಳು, ಕೆಜಿಗಟ್ಟಲೆ ಬಂಗಾರ 2 ಕೋಟಿ ರೂ. ನಗದು, ವಿದೇಶಿ ಮದ್ಯದ ಬಾಟಲಿಗಳು ಸೇರಿ ಸುಮಾರು 25.58 ಕೋಟಿ ರೂಪಾಯಿ ಮೌಲ್ಯದ ಸಂಪತ್ತು ಪತ್ತೆಯಾಗಿದೆ.

# ಅಕ್ರಮವಾಗಿ ಮರ ಕಡಿತ: ಮೂವರು ಅರಣ್ಯಾಧಿಕಾರಿ ಅಮಾನತು

ಚಿಕ್ಕಮಗಳೂರು: ಚಿಕ್ಕಮಗಳೂರಿನ ಭದ್ರಾ ಅಭಯಾರಣ್ಯ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮರ ಕಡಿತ ಮಾಡಿದ ಪ್ರಕರಣ ಸಂಬಂಧ ಮೂವರು ಅರಣ್ಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಅಮಾನತುಗೊಳಿಸಿ ಆದೇಶಿಸಲಾಗಿದೆ.




ಜಿಲ್ಲೆಯ ಭದ್ರಾ ಅಭಯಾರಣ್ಯ ವ್ಯಾಪ್ತಿಯ ತರೀಕೆರೆ ತಾಲೂಕಿನ ತಣಿಗೇಬೈಲು, ಅಯ್ಯನ ಕೆರೆ, ಗುರುಪುರ ಗುಡ್ಡದ ಬೀರನ ಹಳ್ಳಿ ಪ್ರದೇಶದಲ್ಲಿ ಅಕ್ರಮವಾಗಿ ಸಾಗುವಾನಿ, ಬೀಟೆ, ತೇಗದ ಮರಗಳನ್ನು ಕಡಿತಲೆ ಮಾಡಲಾಗಿತ್ತು. ಇದರಿಂದ ಲಕ್ಷಾಂತರ ರೂಪಾಯಿ ನಷ್ಟ ವಾಗಿದೆ. ಅಭಯಾರಣ್ಯದೊಳಗೆ ಅಕ್ರಮ ಪ್ರವೇಶ ಸಾಧ್ಯವಿಲ್ಲ. ಆದರೆ ಲಕ್ಷಾಂತರ ರೂಪಾಯಿ ಮೌಲ್ಯದ ಮರಗಳ ಕಡಿದಿದ್ದು ಹೇಗೆ? ಎಂಬುದು ಎಲ್ಲರ ಪ್ರಶ್ನೆಯಾಗಿದೆ.

ಈ ಪ್ರಕರಣದ ಹಿಂದೆ ಅರಣ್ಯಾಧಿಕಾರಿಗಳ ಸಹಾಯವಿದೆ ಎಂಬ ಆರೋಪವೂ ಕೇಳಿ ಬಂದಿತ್ತು. ಅರಣ್ಯ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯದಿಂದಲೇ ಮರಗಳನ್ನು ಅಕ್ರಮವಾಗಿ ಕಡಿದು ಸಾಗಿಸಲಾಗಿದೆ ಎಂದು ಪರಿಸರವಾದಿಗಳು ಆರೋಪಿಸಿ ದ್ದರು. ಈ ಹಿನ್ನಲೆಯಲ್ಲಿ ಎಚ್ಚೆತ್ತ ಅರಣ್ಯ ಇಲಾಖೆ ಫಾರೆಸ್ಟ್ ಗಾರ್ಡ್ ಸದ್ದಾಂ ಹುಸೇನ್, ಅರುಣ್ ಹಾಗೂ ಡಿಆರ್‌ಎಫ್ಓ ಸುನೀಲ್ ಅಮಾನತುಗೊಳಿಸಿದೆ.

# ಯೋಗ ಸಂಸ್ಕೃತಿ ಹೆಚ್ಚುತ್ತಿದೆ: ಅಂತರಾಷ್ಟ್ರೀಯ ಯೋಗ ಗುರು ಭವರಲಾಲ್ ಆರ್ಯ




ಬೆಳಗಾವಿ: ವೈದ್ಯರು ಮಾತ್ರೆ, ಔಷಧಿಗಳ ಜೊತೆಯಲ್ಲಿ ಯೋಗವನ್ನು ಔಷಧಿಯಾಗಿ ಪಾಲಿಸುವಂತೆ ಹೇಳುವ ಕಾಲ ಇನ್ನೇನು ಕೆಲವೇ ದಿನಗಳಲ್ಲಿ ನಾವೆಲ್ಲ ನೋಡುತ್ತೇವೆ ಎಂದು ಪತಂಜಲಿ ಯೋಗಪೀಠದ ರಾಜಪ್ರಭಾರಿ, ಅಂತರಾಷ್ಟ್ರೀಯ ಯೋಗಗುರು ಭವರಲಾಲ್ ಆರ್ಯ ಅವರು ಅಭಿಪ್ರಾಯಪಟ್ಟರು.

ಇಲ್ಲಿಯ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರವು ಪತಂಜಲಿ ಯೋಗಪೀಠದ 30ನೇ ಸಂಸ್ಥಾಪನಾ ದಿನ ಅಂಗವಾಗಿ ಆಯೋಜಿಸಿದ್ದ ವಿಶೇಷ ಸಂದರ್ಶನದಲ್ಲಿ ಭಾಗವಹಿಸಿ ಮಾತನಾಡಿದರು.

ಪತಂಜಲಿ ಯೋಗ ಪೀಠವು ದೇಶದಾದ್ಯಂತ ಯೋಗವನ್ನು ಪರಿಚಯಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯ ಮಾಡುತ್ತಿದೆ.

ಯೋಗ ಅಷ್ಟೇ ಅಲ್ಲದೆ ಆಯುರ್ವೇದ, ಸ್ವದೇಶಿ, ಗುರುಕುಲ ಶಿಕ್ಷಣ ಪದ್ಧತಿ, ಗ್ರಾಮೀಣ ಅಭಿವೃದ್ಧಿಗಾಗಿ ವಿವಿಧ ಕೆಲಸ ಮಾಡುತ್ತಿದೆ ಎಂದರು.

ಯೋಗವು ದೈಹಿಕ ಆರೋಗ್ಯ ಮಾತ್ರವಲ್ಲದೆ, ಮಾನಸಿಕ ಆರೋಗ್ಯಕ್ಕೆ ಮದ್ದಾಗಿದೆ.

ಇವತ್ತು ಎಲ್ಲರೂ ಒತ್ತಡದ ಜೀವನ ಎದುರಿಸುತ್ತಿದ್ದಾರೆ. ಪ್ರಾಣಾಯಾಮ, ಧ್ಯಾನ ಹಾಗೂ ಸರಳ ಆಸನಗಳನ್ನು ಮಾಡುವುದರ ಮೂಲಕ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ವೃದ್ಧಿಸಬಹುದೆಂದರು.

ಸಮುದಾಯ ರೇಡಿಯೋ ಕೇಂದ್ರದ ಮೂಲಕ ಭಾರತೀಯ ಯೋಗ ಪ್ರಚಾರ ಕುರಿತು ಹೆಚ್ಚಿನ ಕಾರ್ಯಕ್ರಮ ಬಿತ್ತರಿಸುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಹುಕ್ಕೇರಿ ಯೋಗ ಶಿಕ್ಷಕರು ಹುಕ್ಕೇರಿ ತಾಲೂಕಾ ಪ್ರಭಾರಿ ಬಾಲಕೃಷ್ಣ ಕೊಳೇಕರ, ಶ್ರೀಮತಿ ಸುರೇಖಾ ಪಾಟೀಲ, ಅಕ್ಷಯ ಘೋರ್ಪಡೆ, ಆರ್.ಜೆ. ಮೀರಾ, ಕಿರಣ ಚೌಗಲಾ ಮುಂತಾದವರು ಉಪಸ್ಥಿತರಿದ್ದರು.

### ಅವ್ಯವಸ್ಥೆಯ ಆಗರ ಹುಕ್ಕೇರಿ ಆಹಾರ ಇಲಾಖೆ

# ಅನ್ನಭಾಗ್ಯ ಅಕ್ಕಿ ಮಾರಾಟ-ಅನರ್ಹ ಕಾರ್ಡ್ ಪತ್ತೆಗೆ ಇಲ್ಲ ಆಸಕ್ತಿ

ಹುಕ್ಕೇರಿ: ಅನರ್ಹರಿಗೆ ಪಡಿತರ ಚೀಟಿಗಳನ್ನು ಹಂಚಿಕೆ ಮಾಡಿರುವ ಅಕ್ರಮ ಪ್ರಕರಣದಿಂದ ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಸದ್ದು ಮಾಡಿ ಸುದ್ಧಿಯಾಗಿದ್ದ ಹುಕ್ಕೇರಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆಯಲ್ಲಿ ಅವ್ಯವಸ್ಥೆ ತಾಂಡವಾಡುತ್ತಿದೆ.

ಸಾರ್ವಜನಿಕರಿಗೆ ಅತ್ಯಂತ ಸನೀಹವಾದ ಈ ಕಚೇರಿಗೆ ಬೇಕಾದ ಅಗತ್ಯ ಸಿಬ್ಬಂದಿಗಳಿಲ್ಲ. ಎರಡು ಆಹಾರ ನಿರೀಕ್ಷಕ ಹುದ್ದೆ ಭರ್ತಿಯಾಗಿದ್ದು ದ್ವಿತೀಯ ದರ್ಜೆ ಸಹಾಯಕ ಹುದ್ದೆ ಖಾಲಿಯಿದೆ. ಹಾಗಾಗಿ ಕಚೇರಿಯಲ್ಲಿ ಅನಧಿಕೃತ ನೌಕರರ ಹಾವಳಿ ಮೀತಿ ಮೀರಿದೆ.

ಕಚೇರಿ ಕೆಲಸಕ್ಕೆ ಬರುವ ಗ್ರಾಹಕರಿಗೆ ಯಾವುದೇ ಸೌಲಭ್ಯಗಳಿಲ್ಲ. ಕೂಡ್ರಲು ಸೂಕ್ತ ಆಸನಗಳು ಮತ್ತು ಸ್ಥಳಾವಕಾಶ, ಕುಡಿಯುವ ನೀರು, ಮೂತ್ರಾಲಯ-ಶೌಚಾಲಯ ಇಲ್ಲದರಿಂದ ಗ್ರಾಹಕರು ಬಸವಳಿಯುವಂತಾಗಿದೆ. ಇನ್ನು ಕಚೇರಿ ಮಿನಿ ವಿಧಾನಸೌಧದ ಮೇಲ್ಮಹಡಿಯಲ್ಲಿ ಇರುವುದರಿಂದ ವಯೋವೃದ್ಧರು ಸಾಕಷ್ಟು ಹೈರಾಣಾಗುತ್ತಿದ್ದಾರೆ.

ಆಹಾರ ನಿರೀಕ್ಷಕರ ಆಲಸ್ಯದಿಂದ ಕಾಳಸಂತೆಯಲ್ಲಿ ಅವ್ಯಾಹತವಾಗಿ ನಡೆದಿರುವ




ಅನ್ನಭಾಗ್ಯ ಅಕ್ಕಿ ಮಾರಾಟ ದಂಧೆ, ಅನರ್ಹ ಕಾರ್ಡ್ಗಳ ಪತ್ತೆ ಮತ್ತು ದಂಢ ವಸೂಲಿ, ನ್ಯಾಯ ಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲನೆ, ಮೇಲುಸ್ತುವಾರಿ ಸೇರಿದಂತೆ ಮತ್ತಿತರ ಕಾರ್ಯಗಳಿಗೆ ಅಕ್ಷರಶಃ ಗರ ಬಡಿದಿದೆ ಎಂಬ ಗಂಭೀರ ಆರೋಪಗಳು ಕೇಳಿ ಬಂದಿವೆ.

ಪಡಿತರ ಚೀಟಿಗಳ ಹಂಚಿಕೆಯಲ್ಲಿ ಅಕ್ರಮ ಎಸಗಿದ ಪ್ರಕರಣ ಬೆಳಕಿಗೆ ಬಂದ ಬೆನ್ನಲ್ಲೇ ಇಲ್ಲಿನ ಆಹಾರ ಇಲಾಖೆಯ ಕೆಲ ಹುಳುಕುಗಳು ಬೆಳಕಿಗೆ ಬಂದಿದ್ದರೂ ಅಲ್ಲಲ್ಲಿಯೇ ಮುಚ್ಚಿ ಹಾಕುವ ಯತ್ನ ನಡೆದಿದೆ. ಅಧಿಕಾರಿಯ ಹಣದಾಹದ ಸುಳಿಗೆ ಸಿಲುಕಿ ಸೊರಗಿದಂತಾಗಿರುವ ಇಲಾಖೆಯಲ್ಲಿ ಇಲಿ, ಹೆಗ್ಗಣಗಳಂತೆ ತಿಂದು ತೇಗಿದ್ದು ಸಮೃದ್ಧ ಆಹಾರ ಅರಗಿಸಿ ಕಟುಮಸ್ತಾಗಿ ಬೆಳೆದಿದ್ದಾರೆ ಎಂದೇ ವ್ಯಾಖ್ಯಾನಿಸಲಾಗುತ್ತಿದೆ.

ಹುಕ್ಕೇರಿ ಆಹಾರ ಇಲಾಖೆಯ ಮೂಲಕ ಪಡಿತರ ಚೀಟಿ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮದ ತನಿಖೆಗೆ ಪಾರದರ್ಶಕ ಮತ್ತು ಪ್ರಾಮಾಣಿಕ ತಂಡ ನಿಯೋಜಿಸಿದೆ. ಅಲ್ಲಿನ ಕಚೇರಿ ವ್ಯವಸ್ಥೆಯನ್ನು ಸರಿಪಡಿಸಿ ಸಾರ್ವಜನಿಕರು ಮತ್ತು ಗ್ರಾಹಕರಿಗೆ ಉತ್ತಮ ಸೇವೆ ನೀಡಲು ಕ್ರಮ ಕೈಗೊಳ್ಳಲಾಗುವುದು.

**-ಶ್ರೀಶೈಲ ಕಂಕಣವಾಡಿ, ಜಂಟಿ ನಿರ್ದೇಶಕರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ**

**ಕಚೇರಿಗಿಲ್ಲ ನಾಮಫಲಕ:** ಬಹುತೇಕರು ಕಚೇರಿ ಪತ್ತೆಗೆ ಸುಸ್ತಾದ ಪ್ರಸಂಗ ಎದುರಿಸಿದ್ದು ಇಲಾಖೆಯ ಪೂರ್ಣ ಹೆಸರುಳ್ಳ ನಾಮಫಲಕ ಅಳವಡಿಸಲು ಅಧಿಕಾರಿಗಳಿಗೆ ಪುರುಸೊತ್ತಿಲ್ಲದಾಗಿದೆ.

ಬೋರ್ಡ್ ಹಾಕದಷ್ಟೂ ದರಿದ್ರ, ಬೇಸರ ಇದೆಯೇ ಎನ್ನುವ ಪ್ರಶ್ನೆ ಎದುರಾಗಿದೆ. ನಾಮಫಲಕ ಇಲ್ಲದ್ದರಿಂದ ಕಚೇರಿ ಹುಡುಕುವುದು ಕಷ್ಟದ ಕೆಲಸವಾಗಿದೆ. ಹಳ್ಳಿಯಿಂದ ಬರುವ ಗ್ರಾಹಕರು ಮಿನಿ ವಿಧಾನಸೌಧ ಸುತ್ತ ಅಲೆದು ಕೊನೆಗೆ ಎಲ್ಲೂ ಸಿಗಲಿಲ್ಲ ಎಂದು ಹೈರಾಣಾಗಿ ಹೋದವರೂ ಇದ್ದಾರೆ.

**ಮೇಲಾಧಿಕಾರಿಗಳ ಮೌನ:** ಅನ್ನಭಾಗ್ಯ ಅಕ್ಕಿ ಪೂರೈಕೆ ಹೊಣೆ ಹೊತ್ತಿರುವ ಕೆಎಫ್‌ಸಿಎಸ್‌ಸಿ ಮತ್ತು ಟಿಎಪಿಎಂಎಸ್ ಗೋದಾಮಿನಿಂದ ತಲಾ 50 ಸಾವಿರ ಹಾಗೂ ಪ್ರತಿ ನ್ಯಾಯಬೆಲೆ ಅಂಗಡಿಯಿಂದ 500 ರೂ ಕಮಿಷನ್ ರೂಪದ ಕಾಣಿಕೆ ಪ್ರತಿ ತಿಂಗಳು ಆಹಾರ ಅಧಿಕಾರಿಗಳಿಗೆ ಜೇಬು ಸೇರುತ್ತಿದೆ ಎಂಬ ದೂರುಗಳಿವೆ.

ಇನ್ನು ಬಹುತೇಕ ನ್ಯಾಯಬೆಲೆ ಅಂಗಡಿಗಳಲ್ಲಿ ದರಪಟ್ಟಿ ಅಳವಡಿಸಿಲ್ಲ. ಗ್ರಾಹಕರಿಗೆ ಅಕ್ಕಿ ವಿತರಣೆಯಲ್ಲಿ ಕಡಿತ, ರಶೀದಿ ಕೊಡದೇ ಇರುವುದಕ್ಕೆ ಮೇಲಅಧಿಕಾರಿಗಳ ಮೌನ ಅನೇಕ ಅನುಮಾನಗಳಿಗೆ ಎಡೆಮಾಡಿದೆ.

ದಿಕ್ಕು ತಪ್ಪಿದ ತನಿಖೆ: ಇಲ್ಲಿನ ಆಹಾರ ಇಲಾಖೆಯಲ್ಲಿ ನಿಯಮ ಉಲ್ಲಂಘಿಸಿ ರೇಶನ್ ಕಾರ್ಡ್ಗಳನ್ನು ಮಂಜೂರು ಮಾಡಲಾಗಿದೆ ಎಂಬ ಗಂಭೀರ ಆರೋಪ ಕೇಳಿ ಬಂದ ಬೆನ್ನಲ್ಲೇ ಸಚಿವ ಕೆ.ಎಚ್.ಮುನಿಯಪ್ಪ ತಾಲೂಕಿಗೆ ಭೇಟಿ ನೀಡಿ ತನಿಖೆಗೆ ಆದೇಶಿಸಿದ್ದರು.

ತನಿಖಾ ತಂಡ ತನ್ನ ಸಹೋದ್ಯೋಗಿಗಳ ಪರ ಬಂದಿರುವ ಮಾಹಿತಿಯನ್ನಷ್ಟೇ ದಾಖಲಿಸಿದೆ ಎನ್ನಲಾಗಿದೆ.

VOL. 04 ISSUE. 289 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089